ಸಂಪುಟ : 9 ಸಂಚಿಕೆ 01 ಪುಟ : 4 ಬೆಲೆ : 3.00 ಶುಕ್ರವಾರ ಜನವರಿ 26, 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 01 Pages : 4 Price : 3.00 Friday JANUARY 26, 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಸಂಪಾದಕೀಯ

### ನಿಮ್ಮ ಪ್ರೀತಿ, ವಿಶ್ವಾಸವೇ ಶಕ್ತಿ

ಆತ್ಮೀಯರೆ,

ನಿಮ್ಮ ವಿಜಯಸಾಕ್ಷಿ ಕನ್ನಡ ದಿನಪತ್ರಿಕೆ 8 ವಸಂತಗಳನ್ನು ಪೂರೈಸಿ ಇಂದಿಗೆ 9ನೇ ವರ್ಷಕ್ಕೆ ಪಾದಾರ್ಪಣೆ ಮಾಡುತ್ತಿದೆ. ಇಡೀ ಮುದ್ರಣ ಮಾಧ್ಯಮ ಸಂಕಷ್ಟದ ಸ್ಥಿತಿಯಲ್ಲಿದ್ದರೂ ವಿಜಯಸಾಕ್ಷಿ ದಿನಪತ್ರಿಕೆ, ವಾಸ್ತವ, ವಿಭಿನ್ನ, ವಸ್ತುನಿಷ್ಠ ಧ್ಯೇಯದೊಂದಿಗೆ ಮುಂದಡಿ ಇಡುತ್ತಿದೆ. ಇದಕ್ಕೆಲ್ಲಾ ನಿಮ್ಮೆಲರ ಪ್ರೀತಿ, ವಿಶ್ವಾಸವೇ ಕಾರಣ.

ಪತ್ರಿಕೆಗೆ ಓದುಗರೇ ಜೀವಾಳ. ಈ ಓದುಗರು ಕಳೆದ 8 ವರ್ಷಗಳಲ್ಲಿ ಪತ್ರಿಕೆಯನ್ನು ಎಂದಿಗೂ ಕೈಬಿಡದೆ ಪ್ರೋತ್ಸಾಹಿಸಿದ್ದಾರೆ. ಓದುಗರ ಹೊಗಳಿಕೆ–ತೆಗಳಿಕೆ ಎರಡನ್ನೂ ಸ್ವೀಕರಿಸಿ ವಿಜಯಸಾಕ್ಷಿ 9ನೇ ಹೆಜ್ಜೆ ಇಡುತ್ತಿದೆ. ಮುದ್ರಣ ಮಾಧ್ಯಮದ ಜೊತೆಗೆ ಡಿಜಿಟಲ್ ಮಾಧ್ಯಮದಲ್ಲೂ ವಿಜಯಸಾಕ್ಷಿ ಅದೇ ವಿಶ್ವಾಸಾರ್ಹತೆಯನ್ನು ಉಳಿಸಿಕೊಂಡು ಮುನ್ನಡೆಯುತ್ತಿದೆ.

ಮೊದಲೇ ಹೇಳಿದಂತೆ ಮುದ್ರಣ ಮಾಧ್ಯಮ ಸಂಕಷ್ಟದಲ್ಲಿದೆ. ಮುದ್ರಣ ಕಾಗದದಿಂದ ಹಿಡಿದು ಪತ್ರಿಕೆ ಹಂಚುವವರೆಗಿನ ಖರ್ಚು ವೆಚ್ಚಗಳು ಮೂರು ಪಟ್ಟು ಹೆಚ್ಚಾಗಿವೆ. ಬೆಲೆ ಏರಿಕೆ ಹೊಡೆತದಿಂದ ಅನೇಕ ಪತ್ರಿಕೆಗಳು ಬಂದ್ ಆಗಿವೆ. ಆದರೂ ಸೇವೆಯ ಧ್ಯೇಯದೊಂದಿಗೆ ಅನೇಕ ಪತ್ರಿಕೆಗಳು ನಿರಂತರವಾಗಿ ಪ್ರಸಾರಗೊಳ್ಳುತ್ತಿವೆ. ಆ ಪೈಕಿ ವಿಜಯಸಾಕ್ಷಿ ಸಹ ಒಂದು ಎನ್ನುವುದು ಅಭಿಮಾನ ಸಂಗತಿ.

ವಿಜಯಸಾಕ್ಷಿ ಕೇವಲ ಒಂದು ಪತ್ರಿಕೆಯಲ್ಲ, ಅದೊಂದು ಸಾಮಾಜಿಕ ಜವಾಬ್ದಾರಿ. ಕಳೆದ 8 ವರ್ಷಗಳಲ್ಲಿ ಪತ್ರಿಕೆ ತನ್ನ ಹೊಣೆಗಾರಿಕೆಯನ್ನು ಯಶಸ್ವಿಯಾಗಿ ನಿಭಾಯಿಸಿದೆ. ಮುಂದೆಯೂ ನಿಭಾಯಿಸಲಿದೆ. ಪತ್ರಿಕೆಯ ಓದುಗ ಬಳಗ ಸಣ್ಣದಿರಬಹುದು. ಆದರೆ ಸತ್ವಯುತವಾಗಿದೆ. ಆ ಕಾರಣಕ್ಕಾಗಿಯೇ ವಿಜಯ ಸಾಕ್ಷಿ ಇನ್ನಿತರ ಪತ್ರಿಕೆಗಳಿಗಿಂತ ಭಿನ್ನವಾಗಿದೆ.

ಭವಿಷ್ಯದಲ್ಲಿ ವಿಜಯಸಾಕ್ಷಿ ಪತ್ರಿಕೆಯನ್ನು ಮತ್ತಷ್ಟು ವಿಭಿನ್ನವಾಗಿ ರೂಪಿಸುವ ಚಿಂತನೆಯಿದೆ. ಡಿಜಿಟಲ್ ಮಾಧ್ಯಮದ ವಿಸ್ವಾಸಾರ್ಹತೆಯನ್ನು ಮತ್ತಷ್ಟು ಗಟ್ಟಿಗೊಳಿಸಬೇಕಾಗಿದೆ. ನಿಮ್ಮೆಲ್ಲರ ಪ್ರೀತಿ ವಿಶ್ವಾಸ ಸದಾ ಇರಲಿ ಎಂದು ಆಶಿಸುತ್ತಾ, ಹೊಸ ಕನಸುಗಳೊಂದಿಗೆ ಹೊಸ ಹೆಜ್ಜೆಗೆ ಇವತ್ತು ನಾಂದಿ.

ವಿಜಯಸಾಕ್ಷಿ ಓದುಗರಿಗೆ ಗಣರಾಜ್ಯೋತ್ಸವದ ಹಾರ್ದಿಕ ಶುಭಾಶಯಗಳು

ಧನ್ಯವಾದಗಳು

– ಎಚ್.ಎಂ. ಶರೀಫನವರ್
ಪ್ರಧಾನ ಸಂಪಾದಕರು

## 14ನೇ 'ರಾಷ್ಟ್ರೀಯ ಮತದಾರರ ದಿನಾಚರಣೆ' ಕಾರ್ಯಕ್ರಮದಲ್ಲಿ ನ್ಯಾ.ಮೂ ಬಸವರಾಜ

# ಬಲಿಷ್ಠ ಭಾರತ ನಿರ್ಮಾಣಕ್ಕೆ ಮುಂದಾಗಿ

■ ವಿಜಯಸಾಕ್ಷಿ ಸುದ್ದಿ, ಗದಗ

ಅಬ್ರಾಹಿಮ್ ಲಿಂಕನ್ ಹೇಳಿದಂತೆ ಒಂದು ವೋಟಿನ ಶಕ್ತಿ ಬಂದೂಕಿನ ಬುಲೆಟ್‌ಗಿಂತಲೂ ಅಧಿಕ ಶಕ್ತಿಯನ್ನು ಹೊಂದಿರುತ್ತದೆ. ನಾವೆಲ್ಲರೂ ಬಲಿಷ್ಠ ಭಾರತ ನಿರ್ಮಾಣಕ್ಕಾಗಿ ತಪ್ಪದೇ ಅರ್ಹರಿಗೆ ನಮ್ಮ ಮತವನ್ನು ಚಲಾಯಿಸೋಣ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಬಸವರಾಜ ಹೇಳಿದರು.



ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಗುರುವಾರ ಭಾರತದ ಚುನಾವಣಾ ಆಯೋಗ, ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಗಳ ಸಂಯುಕ್ತ ಆಶ್ರಯದಲ್ಲಿ ಜರುಗಿದ 14ನೇ 'ರಾಷ್ಟ್ರೀಯ ಮತದಾರರ ದಿನಾಚರಣೆ' ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಈಗಾಗಲೇ ಮತದಾನ ಚೀಟಿಯನ್ನು ಹೊಂದಿರುವರು ಮತದಾನದ ಮಹತ್ವದ ಬಗ್ಗೆ ಜಾಗೃತರಾಗಬೇಕು. ಹೊಸದಾಗಿ 18 ವರ್ಷ ತುಂಬಿದವರು ತಮ್ಮ ಹೆಸರನ್ನು ಮತದಾರರ ಪಟ್ಟಿಯಲ್ಲಿ ನೋಂದಾಯಿಸಬೇಕು ಎಂದರು.

ಭಾರತ ಚುನಾವಣಾ ಆಯೋಗದ ಸಂಸ್ಥಾಪನಾ ದಿನವಾದ ಜ.25ರಂದು 2011ರಿಂದ ಪ್ರತಿ ವರ್ಷ ರಾಷ್ಟ್ರೀಯ ಮತದಾರರ ದಿನಾಚರಣೆಯನ್ನಾಗಿ ಆಚರಿಸುತ್ತಾ ಬಂದಿದೆ. ರಾಷ್ಟ್ರವನ್ನು ಮುನ್ನಡೆಸಲು ಮತ್ತು ಜನರ ಸಮಸ್ಯೆಗೆ ಸ್ಪಂದಿಸುವ ನಾಯಕರನ್ನು ಚುನಾಯಿಸಿ ನಮಗೆ ಬೇಕಾದ ಸರ್ಕಾರವನ್ನು ಆಯ್ಕೆ ಮಾಡಿಕೊಳ್ಳುವುದರಲ್ಲಿ ಮತದಾನವು ಭದ್ರ ಬುನಾದಿಯಾಗಿದೆ. ನಗರದಲ್ಲಿ ವಿದ್ಯಾವಂತರು ಮತದಾನದ ದಿನದಂದೇ ಪ್ರವಾಸಕ್ಕೆ ಹೋಗುವುದರ ಮೂಲಕ ಮತದಾನದಿಂದ ತಪ್ಪಿಸಿಕೊಳ್ಳುತ್ತಿರುವುದು ಸರಿಯಾದ ಕ್ರಮವಲ್ಲ ಎಂದರು.

ಕೆಲವು ಕಡೆಗಳಲ್ಲಿ ಬಸ್ಸಿನ ಸೌಕರ್ಯ ಸೇರಿದಂತೆ ಇತರೆ ಸೌಕರ್ಯಗಳಿಲ್ಲವೆಂದು ಮತದಾನ ಬಹಿಷ್ಕಾರ ಮಾಡವುದು ಒಳ್ಳೆಯದಲ್ಲ. ನಮ್ಮ ಹಕ್ಕುಗಳ ಬೇಡಿಕೆಯೇ ಬೇರೆ ಮತ್ತು ಮತದಾನ ಚಲಾಯಿಸುವುದೇ ಬೇರೆ. ವಲಸಿಗರು ಮತ್ತು ನೌಕರರು ಆನ್‌ಲೈನ್ ಮೂಲಕ ಮತದಾರರ ಪಟ್ಟಿಯಲ್ಲಿ ನೋಂದಾಯಿಸಲು ಅವಕಾಶವಿದೆ. ಅದರ ಸದುಪಯೋಗ ಪಡೆದುಕೊಂಡು ಹಾಗೂ ಮತದಾನಕ್ಕಿಂತ ಇನ್ನೊಂದಿಲ್ಲ. 'ನಾನು ಖಚಿತವಾಗಿ ಮತದಾನ ಮಾಡುವೆ' ಎಂಬುದು ಪ್ರಸಕ್ತ ವರ್ಷದ ವಾಕ್ಯವಾಗಿದ್ದು, ಅದರಂತೆ ನಾವೆಲ್ಲರೂ ನಡೆಯೋಣ ಎಂದರು.

ಕಳೆದ ವಿಧಾನಸಭಾ ಚುನಾವಣೆಯಲ್ಲಿ ಜಿಲ್ಲೆಯಲ್ಲಿ ಒಟ್ಟಾರೆ ಅರ್ಹ ಮತದಾರರ ಪೈಕಿ ಶೇ. 73.84ರಷ್ಟು ಮತದಾನವಾಗಿದೆ. ಈ ಪ್ರಮಾಣವು ಶೇ.100ರಷ್ಟು ಆಗಬೇಕಿದೆ. ಅರ್ಹ ಮತದಾರರೆಲ್ಲರೂ ಮತ ಚಲಾಯಿಸುವ ಮೂಲಕ ಸದೃಢ ರಾಷ್ಟ್ರ ನಿರ್ಮಾಣದಲ್ಲಿ ಭಾಗಿಯಾಗೋಣ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಬಸವರಾಜ ಹೇಳಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಗುರುಪ್ರಸಾದ.ಕೆ. ಮಾತನಾಡಿ, ಯುವ ಮತದಾರಲ್ಲಿ ಮತದಾನ ಪ್ರೋತ್ಸಾಹಿಸಲು 25–01–2011ರಿಂದ ರಾಷ್ಟ್ರೀಯ ಮತದಾರರ ದಿನಾಚರಣೆಯನ್ನು ಆಚರಿಸಲಾಗುತ್ತಿದೆ.

ಮತ ಹಾಕದೇ ಅಧಿಕಾರದಲ್ಲಿರುವ ಸರ್ಕಾರ ಒಳ್ಳೆಯ ಆಡಳಿತ ನೀಡುತ್ತಿಲ್ಲ ಎಂದು ದೂಷಿಸುವುದು ಸರಿಯಲ್ಲ. 1950ರ ಸಂವಿಧಾನ ಜಾರಿಯಾದ ಮೇಲೆ ಸಾರ್ವತ್ರಿಕ ಮತದಾನದ ಹಕ್ಕನ್ನು ನೀಡಲಾಯಿತು. ನ್ಯಾಯಯುತವಾದ ಮತ್ತು ಸ್ವತಂತ್ರ ಮತದಾನವು ಸಂವಿಧಾನದ ಮೂಲ ಸ್ವರೂಪವಾಗಿದೆ. ಹಾಗಾಗಿ ಎಲ್ಲರೂ ಮತದಾನ ಮಾಡಿ ಎಂದರು.

ಅಪರ ಜಿಲ್ಲಾಧಿಕಾರಿ ಹಾಗೂ ಅಪರ ಜಿಲ್ಲಾ ಚುನಾವಣಾಧಿಕಾರಿ ಅನ್ನಪೂರ್ಣಾ ಮುದುಕಮ್ಮನವರ ಮತದಾರರ ಪ್ರತಿಜ್ಞಾವಿಧಿ ಬೋಧಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಮಾತನಾಡಿ, ಮೂಲಭೂತ ಕರ್ತವ್ಯವಾದ ಮತದಾನವು ನಮಗೆ ಶಕ್ತಿಯುತವಾದ ಆಯುಧವಿದ್ದಂತೆ.

▶▶ 3ನೇ ಪುಟಕ್ಕೆ




## ಶಾಸಕ ಜಿ.ಎಸ್. ಪಾಟೀಲ ಅಧ್ಯಕ್ಷತೆಯಲ್ಲಿ ಸಾಹಿತ್ಯ ಸಮ್ಮೇಳನದ ಪೂರ್ವಭಾವಿ ಸಭೆ

# ನೀಡಿದ ಜವಾಬ್ದಾರಿಗಳನ್ನು ಎಚ್ಚರಿಕೆಯಿಂದ ನಿಭಾಯಿಸಿ

■ ವಿಜಯಸಾಕ್ಷಿ ಸುದ್ದಿ, ರೋಣ

ಫೆ. 23, 24, 25ರಂದು ಗಜೇಂದ್ರಗಡದಲ್ಲಿ ಜರುಗಲಿರುವ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ವಿಷಯವಾಗಿ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿದರೆ ಸಹಿಸುವುದಿಲ್ಲ ಎಂದು ಶಾಸಕ ಜಿ.ಎಸ್. ಪಾಟೀಲ ಎಚ್ಚರಿಕೆ ನೀಡಿದರು.




ಅವರು ಗುರುವಾರ ತಾ.ಪಂ ಸಭಾಭವನದಲ್ಲಿ ಜರುಗಿದ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ವಿವಿಧ ಸಮಿತಿ ರಚನೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಅತ್ಯಂತ ಯಶಸ್ವಿಯಾಗಿ ನಡೆಸಲು ಅಧಿಕಾರಿಗಳು ಹಾಗೂ ಸಮಿತಿಗಳ ಮುಖ್ಯಸ್ಥರು ಕ್ರಮ ವಹಿಸಬೇಕು. ಅಲ್ಲದೆ ಸಮಿತಿಗಳಿಗೆ ನೀಡಿರುವ ಜವಾಬ್ದಾರಿಗಳನ್ನು ಅತ್ಯಂತ ಎಚ್ಚರಿಕೆಯಿಂದ ಹಾಗೂ ಸಮಸ್ಯೆಗಳು ಉದ್ಭವಿಸದಂತೆ ನಿಭಾಯಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.


ಕನ್ನಡ ಏಕೀಕರಣ ಹೋರಾಟಗಾರ ದಿ.ಅಂದಾನಪ್ಪ ದೊಡ್ಡಮೇಟಿಯವರ ಜನ್ಮಸ್ಥಳ ಜಕ್ಕಲಿ ಗ್ರಾಮದಿಂದ ಕನ್ನಡ ನಾಡು–ನುಡಿ ಹಾಗೂ ಸಾಹಿತ್ಯವನ್ನು ಪರಿಚಯಿಸುವ ಮೆರವಣಿಗೆ ಫೆ.23ರಂದು ಬೆಳಿಗ್ಗೆ ಹೊರಡಲಿದ್ದು, ಸ್ಥಳೀಯ ಗ್ರಾ.ಪಂ ಮತ್ತು ತಾ.ಪಂನವರು ಗ್ರಾಮದ ಸ್ವಚ್ಛತೆಯ ಬಗ್ಗೆ ಗಮನ ಹರಿಸಬೇಕು. ಶಾಲಾ ಮಕ್ಕಳಿಗೆ, ಸಾಹಿತ್ಯಾಭಿಮಾನಿಗಳಿಗೆ ಕುಡಿಯುವ ನಿರಿನ ವ್ಯವಸ್ಥೆಯನ್ನು ಕಲ್ಪಿಸಬೇಕು. ನಂತರ ನರೇಗಲ್ಲ ಪಟ್ಟಣದ ಬಸ್ ನಿಲ್ದಾಣ ಬಳಿಯಿರುವ ಶಾಲಾ ಆವರಣದಲ್ಲಿ ಬಹಿರಂಗ ಸಭೆ ನಡೆಯಲಿದ್ದು, ಅಲ್ಲಿ ಊಟದ ವ್ಯವಸ್ಥೆ ಮಾಡಲಾಗಿದೆ. ಸ್ಥಳೀಯ ಪುರಸಭೆಯವರು ಪಟ್ಟಣದ ಸೌಂದರ್ಯಕ್ಕೆ ಹೆಚ್ಚಿನ ಒತ್ತು ನಿಡಬೇಕು. ಮುಖ್ಯವಾಗಿ ಫೆ.24 ಹಾಗೂ 25ರಂದು ನಡೆಯುವ ಕಾರ್ಯಕ್ರಮದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದರು.

ಕಸಾಪ ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲ, ತಹಸೀಲ್ದಾರ ಕೆ. ನಾಗರಾಜ, ತಾ.ಪಂ ಇಒ ರವಿ ಎ.ಎನ್., ಡಿ. ಮೋಹನ್, ಪಿಎಸ್‌ಐ ಎಲ್.ಕೆ. ಜೂಲಕಟ್ಟಿ, ಮುಖಂಡರಾದ ಸಿದ್ದಣ್ಣ ಬಂಡಿ, ಪರಶುರಾಮ ಅಳಗವಾಡಿ, ವಿ.ಬಿ. ಸೋಮನಕಟ್ಟಿಮಠ, ಯೂಸುಪ್ ಇಟಗಿ, ರಾಜು ಸಾಂಗ್ಲಿಕರ, ಮರ್ತುಜಾ ಡಾಲಾಯತ, ರಮಾಕಾಂತ ಕಮತಗಿ ಮುಂತಾದವರು ಉಪಸ್ಥಿತರಿದ್ದರು.

> ಫೆ.24ರಂದು ಗಜೇಂದ್ರಗಡ ಪಟ್ಟಣದ ಮೈಸೂರ ಮಠದಿಂದ ಕನ್ನಡಾಂಬೆಯ ಭಾವಚಿತ್ರ ಮೆರವಣಿಗೆ ಹೊರಡಲಿದೆ. ಈ ಸಂದರ್ಭದಲ್ಲಿ 501 ಮಹಿಳೆಯರಿಂದ ಕುಂಭಮೇಳ, ಸ್ತಬ್ಧ ಚಿತ್ರ, ರೂಪಕಗಳ ಮೆರವಣಿಗೆಯನ್ನೂ ಆಯೋಜಿಸಲಾಗಿದೆ. ನಗರದ ಜನತೆ ಕನ್ನಡ ಸಾಹಿತ್ಯದ ಹಬ್ಬವನ್ನು ವಿಜ್ರಂಭಣೆಯಿಂದ ಆಚರಿಸುವ ಮೂಲಕ ನಾಡ ಹಬ್ಬದಲ್ಲಿ ಭಾಗಿಯಾಗಬೇಕು.
>
> – ಜಿ.ಎಸ್. ಪಾಟೀಲ.
> ಶಾಸಕರು, ರೋಣ.

## ಸಿದ್ದೇಶ್ವರ ಶಾಸ್ತ್ರಿಗಳಿಗೆ ಕುಮಾರವ್ಯಾಸ ಪ್ರಶಸ್ತಿ

■ ವಿಜಯಸಾಕ್ಷಿ ಸುದ್ದಿ, ಗದಗ



ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕೊಡಮಾಡುವ 2022–23ನೇ ಸಾಲಿನ ಕುಮಾರವ್ಯಾಸ ಪ್ರಶಸ್ತಿಗೆ ಸಿದ್ದೇಶ್ವರ ಶಾಸ್ತ್ರಿಗಳು ತೆಲ್ಲೂರ ಆಯ್ಕೆಯಾಗಿದ್ದಾರೆ.

ಮೂಲತಃ ಕಲಬುರ್ಗಿ ಜಿಲ್ಲೆ ಅಫಜಲಪುರ ತಾಲೂಕು ತೆಲ್ಲೂರ ಗ್ರಾಮದಲ್ಲಿ ಜನಿಸಿದ ಸಿದ್ದೇಶ್ವರ ಶಾಸ್ತ್ರಿಗಳು, ತಮ್ಮ ಬಾಲ್ಯ ಹಾಗೂ ಸಂಗೀತ ಶಿಕ್ಷಣವನ್ನು ಗದಗ ವೀರೇಶ್ವರ ಪುಣ್ಯಾಶ್ರಮದಲ್ಲಿ ಪೂರೈಸಿದರು. ಗದಗದಲ್ಲಿ ನೆಲೆನಿಂತು ಸಾಹಿತಿಗಳಾಗಿ, ಪ್ರವಚನ ಪಟುಗಳಾಗಿ, ಸಂಗೀತಗಾರರಾಗಿ ಐದು ದಶಕದಿಂದ ಸೇವೆ ಸಲ್ಲಿಸುತ್ತಿದ್ದಾರೆ.

ಆಕಾಶವಾಣಿ ಬಿ ಗ್ರೇಡ್ ಕಲಾವಿದರಾಗಿದ್ದ ಸಿದ್ದೇಶ್ವರ ಶಾಸ್ತ್ರಿಗಳ ಸಂಗೀತ, ಸಾಹಿತ್ಯ ಸೇವೆ ಗುರುತಿಸಿ ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ ಕಲಾಶ್ರೀ ಪ್ರಶಸ್ತಿ ನೀಡಿ ಗೌರವಿಸಿದೆ. ನಾಡಿನುದ್ದಗಲಕ್ಕೂ ಪ್ರವಚನ ನೀಡಿ, 50ಕ್ಕೂ ಹೆಚ್ಚು ಕೃತಿಗಳ ರಚನೆ, ಸಂಪಾದನೆ ಮಾಡಿ ಹೆಸರಾಗಿರುವ ಸಿದ್ದೇಶ್ವರ ಶಾಸ್ತ್ರಿಗಳಿಗೆ ಈ ಬಾರಿ ಕುಮಾರವ್ಯಾಸ ಪ್ರಶಸ್ತಿ ಸಂದಿದೆ.

## ಜಿಲ್ಲಾಡಳಿತದಲ್ಲಿ ಹುತಾತ್ಮ ದಿನಾಚರಣೆ

■ ವಿಜಯಸಾಕ್ಷಿ ಸುದ್ದಿ, ಗದಗ



ಗದಗ ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ಜನವರಿ 26ರಂದು ಬೆಳಿಗ್ಗೆ 11 ಗಂಟೆಗೆ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಅವರ ಹುತಾತ್ಮ ದಿನಾಚರಣೆ ಏರ್ಪಡಿಸಲಾಗಿದೆ. ಈ ಕಾರ್ಯಕ್ರಮದಲ್ಲಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಅವರ ಅಭಿಮಾನಿಗಳು, ಸಾರ್ವಜನಿಕರು ಪಾಲ್ಗೊಳ್ಳಲು ಪ್ರಕಟಣೆ ತಿಳಿಸಿದೆ.

## ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ಅವಳಿ ನಗರದಲ್ಲಿ ಜನವರಿ 26ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.


ಸ್ಥಳಗಳ ವಿವರ : ವಾರ್ಡ್ ನಂ. 2ರಲ್ಲಿ ಸೆಟ್ಲ್‌ಮೆಂಟ್ ವೆಲ್ಫೇರ್ ಟೌನ್‌ಶಿಪ್, ಹನುಮಂತ ದೇವರ ಗುಡಿ ಲೈನ್, ಹರಣ ಶಿಕಾರಿ, ಗಾಂಧಿನಗರ ಸಬ್ ಜೇಲ್ ಲೈನ್, ಹಾಕಿ ಗ್ರೌಂಡ್ ಭಾಗ, ವಾರ್ಡ್ ನಂ. 10ರಲ್ಲಿ ಸಿಹಿ ನೀರಿನ ಭಾವಿ ಸಟ್, ಮಸೂತಿ ಲೈನ್, ಮುಳಗುಂದ ಅವರ ಲೈನ್, ಮಾನೆದವರ್ ಲೈನ್, ಮಲ್ಲಿಕಾರ್ಜುನ ಗುಡಿ ಲೈನ್, ಕಲ್ಮನಿಯವರ ಲೈನ್, ಗಣಾಚಾರಿ ಅವರ ಲೈನ್, ಕಮ್ಮಾರ್ ಅವರ ಲೈನ್,

ವಾರ್ಡ್ ನಂ. 6ರಲ್ಲಿ ದೇವದಾರ ಅವರ ಲೈನ್, ಮ್ಯಾಗೇರಿ ಅವರ ಲೈನ್, ವಾರ್ಡ್ ನಂ. 20–19 ರಲ್ಲಿ ಪಲ್ಲೇದವರ ಓಣಿ ಸಿಟಿ ಹಾಲ್, 1, 2 ಹಾಳದಿಬ್ಬ ಕರಿದೇವರ ಗುಡಿ ಲೈನ್, ವಿಭೂತಿಯವರ ಬನ್ನಿಕಟ್ಟಿ ಭಾಗ 1,2 ಕೊಟ್ಟು ಭಾಗ 1,2 ಹುಲಿಗೆಮ್ಮನ ಗುಡಿ, ಗೌಳಿಯವರು ಭಾಗಗಳು ಖಾನತೋಟ ಶರೀಫಜ್ಜನ ಗದ್ದುಗೆ, ಭಾಗ 2 ಅವರ ಭಾಗ 3 ವಾರ್ಡ್ ನಂ. 27, 30ರಲ್ಲಿ ಕಾಶಿ ವಿಶ್ವನಾಥ ನಗರ, ಅಸೂಟಿಯವರ ಲೈನ್, ಹನುಮಂತ ದೇವರ ಗುಡಿ ಲೈನ್, ದುರ್ಗಮ್ಮನ ಗುಡಿ ಅವರ ಲೈನ್, ಮಾಕೂಟೇಶ್ವರ ಗುಡಿ, ವಿಆರ್‌ಎಲ್ ಆಫೀಸ್, ಟಿ.ವಿ.ಎಸ್.ಶೋ ರೂಮ್, ಅಬ್ಬಿಗೇರಿ ಲೇಔಟ್ ಮುತ್ತಿನ ಪೆಂಡಿಮಠ ಅವರ ಮನೆ, ರೋಣದವರ್ ಲೈನ್, ಜೋಶಿ ಯವರ್ ಲೈನ್.

ಈಗಾಗಲೇ ಕುಡಿಯುವ ನೀರಿನ ನಳ ಹೊಂದಿರುವ ಬಾಕಿದಾರರ ಪಟ್ಟಿ ತಯಾರಿಸಿದ್ದು, ನಾಗರಿಕರು ಕೂಡಲೇ ತಮ್ಮ ಕುಡಿಯುವ ನೀರಿನ ಬಾಕಿ ಕರವನ್ನು ಸಂದಾಯ ಮಾಡುವಂತೆ ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಚಿವ ಎಚ್.ಕೆ.ಪಾಟೀಲ ಅವರ ಪ್ರವಾಸ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ



ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವರ ಪ್ರವಾಸದ ವಿವರ ಇಂತಿದೆ. ಸಚಿವರು ಜ. 26ರಂದು ಬೆಳಗ್ಗೆ 8.30 ಗಂಟೆಗೆ ನಗರದ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ ಗಣರಾಜ್ಯೋತ್ಸವ ಆಚರಣೆಯಲ್ಲಿ ಪಾಲ್ಗೊಳ್ಳುವರು. ಬೆ. 9ಗಂಟೆಗೆ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜರುಗಲಿರುವ ಗಣರಾಜ್ಯೋತ್ಸ ದಿನಾಚರಣೆ ಪ್ರಯುಕ್ತ ಧ್ವಜಾರೋಹಣ ನೆರವೇರಿಸುವರು. 9.30 ಗಂಟೆಗೆ ಸ್ತಬ್ಧ ಚಿತ್ರ ಹಾಗೂ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡುವರು.

ಸಾಯಂಕಾಲ 5.30 ಗಂಟೆಗೆ ನಗರದ ಡಾ.ಬಿ.ಆರ್.ಅಂಬೇಡ್ಕರ ಭವನದಲ್ಲಿ ಜರುಗಲಿರುವ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮ ಹಾಗೂ ಗದಗ–ಬೆಟಗೇರಿ ನಗರಸಭೆ, ನೆರೆಹೊರೆ ಗುಂಪು, ಪ್ರದೇಶ ಸಭಾ ಮತ್ತು ವಾರ್ಡ್ ಸಮಿತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ರಾತ್ರಿ 8 ಗಂಟೆಗೆ ಹುಬ್ಬಳ್ಳಿ ಮೂಲಕ ಮೈಸೂರಿಗೆ ಪ್ರಯಾಣಿ ಬೆಳೆಸುವರು.

ಜ.27ರಂದು ಬೆ. 11 ಗಂಟೆಗೆ ಮೈಸೂರಿನ ವಿಜಯನಗರದಲ್ಲಿನ ಶ್ರೀ ಕಲಾನಿಕೇತನ ಸ್ಕೂಲ ಆಫ್ ಆರ್ಟ್ಸ್‌ನಲ್ಲಿ ಏಕವ್ಯಕ್ತಿ ಚಿತ್ರಕಲಾ ಪ್ರದರ್ಶನ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಮ.1 ಗಂಟೆಗೆ ಮೈಸೂರು ವಸ್ತು ಪ್ರದರ್ಶನ ಪ್ರಾಧಿಕಾರ ಆವರಣದಲ್ಲಿ ಕರ್ನಾಟಕ ಪ್ರಾಗೈತಿಹಾಸಿಕ ಕಾಲದ ಅವಶೇಷಗಳು ಕಾರ್ಯಕ್ರಮದಲ್ಲಿ ಭಾಗವಹಿಸುವರು. ಸಾ. 7 ಗಂಟೆಗೆ ಮೈಸೂರು ವಿಶ್ವವಿದ್ಯಾಲಯದ ಬಯಲು ರಂಗಮಂದಿರದಲ್ಲಿ ಮೈಸೂರು ಪೆಸ್ಟ–2024 ಕುರಿತು ಸಾಂಸ್ಕೃತಿಕ ವೈಭವ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸಿ ರಾ. 9.30 ಗಂಟೆಗೆ ರೈಲಿನ ಮೂಲಕ ಹುಬ್ಬಳ್ಳಿಗೆ ಪ್ರಯಾಣ ಬೆಳೆಸುವರು. ಜ.28 ರಂದು ಮುಂಜಾನೆ 5.20 ಗಂಟೆಗೆ ಹುಬ್ಬಳ್ಳಿಯಿಂದ ರಸ್ತೆಯ ಮೂಲಕ ಗದಗ ಆಗಮಿಸುವರು ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

## ಚಂದನ ವಾಹಿನಿಯಲ್ಲಿ 'ಸಮಾನತೆಯ ಕಡೆಗೆ' ಕನ್ನಡ ಚಲನಚಿತ್ರ ಪ್ರದರ್ಶನ

■ ವಿಜಯಸಾಕ್ಷಿ ಸುದ್ದಿ, ಗದಗ

ಅಸ್ಪೃಶ್ಯತೆ ನಿವಾರಣೆ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಸಲುವಾಗಿ 'ಸಮಾನತೆಯ ಕಡೆಗೆ' ಎಂಬ ಕನ್ನಡ ಚಲನಚಿತ್ರವನ್ನು ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಪ್ರಾಯೋಜನೆ ಮಾಡಿ ಸರ್ಕಾರಿ ಟಿ.ವಿ.ಚಾನಲ್ ಆದ ಚಂದನವಾಹಿನಿಯಲ್ಲಿ ಜನವರಿ 26ರ ಗಣರಾಜ್ಯೋತ್ಸವ ದಿನದಂದು ಮಧ್ಯಾಹ್ನ 2.30 ರಿಂದ 4.30 ರ ಅವಧಿಯಲ್ಲಿ ಪ್ರಸಾರ ಮಾಡಲಾಗುವುದು. ಸಾರ್ವಜನಿಕರು ಈ ಚಲನಚಿತ್ರವನ್ನು ವೀಕ್ಷಿಸಲು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜ.30ರಂದು ಕಸಾಯಿಖಾನೆ, ಮಾಂಸ ಮಾರಾಟ ಬಂದ್

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ನಗರಸಭೆ ವ್ಯಾಪ್ತಿಯ ಕಸಾಯಿಖಾನೆಗಳಲ್ಲಿ ಪ್ರಾಣಿವಧೆ ಮಾಡುವ ಹಾಗೂ ಮಾಂಸ ಮಾರಾಟಗಾರರಿಗೆ ತಿಳಿಯಪಡಿಸುವುದೇನೆಂದರೆ, ಸರ್ವೋದಯ ದಿನದ ಅಂಗವಾಗಿ ಜನವರಿ 30ರಂದು ಜಾನುವಾರುಗಳ ವಧೆ ಹಾಗೂ ಮಾಂಸ ಮಾರಾಟ ಮಾಡುವುದನ್ನು ನಿಷೇಧಿಸಲಾಗಿದೆ. ಮಾಂಸ ಮಾರಾಟ ಮಾಡುವದಾಗಲಿ ಹಾಗೂ ಜಾನುವಾರುಗಳನ್ನು ವಧೆ ಮಾಡದಿರಲು ಸೂಚಿಸಲಾಗಿದೆ. ಈ ಆದೇಶವನ್ನು ಉಲ್ಲಂಘಿಸಿದಲ್ಲಿ ಅಂಥವರ ಲೈಸನ್ಸನ್ನು ರದ್ದು ಮಾಡಲಾಗುವುದು ಎಂದು ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್.ಗೆ ರಾಜ್ಯಮಟ್ಟದ ಪ್ರಶಸ್ತಿ ಪ್ರದಾನ




■ ವಿಜಯಸಾಕ್ಷಿ ಸುದ್ದಿ, ಗದಗ

'ಮತದಾನಕ್ಕಿಂತ ಇನ್ನೊಂದಿಲ್ಲ. ನಾನೂ ಖಚಿತವಾಗಿ ಮತದಾನ ಮಾಡುವೆ' ಎಂಬ ವಿಶೇಷ ಧ್ಯೇಯವಾಕ್ಯದೊಂದಿಗೆ ಗುರುವಾರದಂದು ಬೆಂಗಳೂರಿನ ಸರ್ ಪುಟ್ಟಣ್ಣ ಚೆಟ್ಟಿ ಪುರಭವನದಲ್ಲಿ ಜರುಗಿದ 14ನೇ ರಾಷ್ಟ್ರೀಯ ಮತದಾರರ ದಿನಾಚರಣೆ ಕಾರ್ಯಕ್ರಮದಲ್ಲಿ ಚುನಾವಣಾ ಸಂಬಂಧಿತ ವಿವಿಧ ವಿಭಾಗಗಳಲ್ಲಿ ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದ ಗದಗ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಾದ ವೈಶಾಲಿ ಎಂ.ಎಲ್. ಅವರಿಗೆ ರಾಜ್ಯಪಾಲರಾದ ಥಾವರಚಂದ ಗೆಹ್ಲೋಟ್ ಅವರು ಪ್ರಶಸ್ತಿ ಪ್ರದಾನ ಮಾಡಿದರು.

ಈ ಸಂದರ್ಭದಲ್ಲಿ ಬಿ.ಬಿ.ಎಂ.ಪಿ ಮುಖ್ಯ ಆಯುಕ್ತರಾದ ತುಷಾರ ಗಿರಿನಾಥ್, ರಾಜ್ಯ ಮುಖ್ಯ ಚುನಾವಣಾಧಿಕಾರಿ ಮನೋಜ ಕುಮಾರ ಮೀನಾ ಉಪಸ್ಥಿತರಿದ್ದರು.

## ಜಾನಪದ ಕಲಾ ತರಬೇತಿ ಶಿಬಿರಕ್ಕೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2023–24ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಉಪಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಯುವಜನರಿಗಾಗಿ ಬೆಳಗಾವಿ ವಿಭಾಗ ಮಟ್ಟದ ಜಾನಪದ ಕಲಾ ತರಬೇತಿ ಶಿಬಿರವನ್ನು ಬೆಳಗಾವಿ ಜಿಲ್ಲೆಯಲ್ಲಿ ಆಯೋಜಿಸಲು ತೀರ್ಮಾನಿಸಲಾಗಿದೆ.

ಜಾನಪದ ಕಲಾ ತರಬೇತಿ ಶಿಬಿರದಲ್ಲಿ ಭಾಗವಹಿಸಲು ಗದಗ ಜಿಲ್ಲೆಯಿಂದ 10 ಜನ ಪರಿಶಿಷ್ಟ ಜಾತಿ ಹಾಗೂ 04 ಜನ ಪರಿಶಿಷ್ಟ ಪಂಗಡ ಈ ಪ್ರಕಾರ ಒಟ್ಟು 14 ಜನ ಯುವಕ/ಯುವತಿಯರನ್ನು ಗುರುತಿಸಿ ಗದಗ ಜಿಲ್ಲೆಯಿಂದ ಪಟ್ಟಿಯನ್ನು ಕಳುಹಿಸಿಕೊಡಲು ನಿರ್ದೇಶಿಸಿದೆ.

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಯುವಕ/ಯುವತಿಯರು ಜನವರಿ 30 ರೊಳಗಾಗಿ ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣ, ಗದಗ ಇಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

ಯುವಕ/ಯುವತಿಯರ ವಯಸ್ಸು 15–29 ವರ್ಷಗಳಿಗೆ ಮೀರಿರಬಾರದು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದವರಾಗಿರಬೇಕು. ನಿಗಧಿತ ನಮೂನೆಯಲ್ಲಿ ವಿವರವನ್ನು ನೀಡುವುದು. ಬ್ಯಾಂಕ್ ಖಾತೆ ಕಡ್ಡಾಯವಾಗಿ ಅರ್ಜಿದಾರರ ಹೆಸರಿನಲ್ಲಿರಬೇಕು. ಬ್ಯಾಂಕ್ ಪಾಸ್ ಪುಸ್ತಕದ ಮುಖಪುಟದ ಝರಾಕ್ಸ್ ಪ್ರತಿ ಲಗತ್ತಿಸಬೇಕು. (ಹೆಸರು, ಖಾತೆ ಸಂಖ್ಯೆ, ಐ.ಎಫ್.ಎಸ್.ಸಿ. ಕೋಡ್ ಇರುವ ಪುಟ) ಶಿಬಿರಾರ್ಥಿಗಳು ಭಾವಚಿತ್ರವುಳ್ಳ ಆಧಾರ್ ಸಂಖ್ಯೆ ಮತ್ತು ಜಾತಿ ಪ್ರಮಾಣ ಪತ್ರವನ್ನು ಸಲ್ಲಿಸುವುದು. ಯುವಜನಮೇಳ ಮತ್ತು ಯುವಜನೋತ್ಸವ ಕಾರ್ಯಕ್ರಮಗಳಿಗೆ ಅಳವಡಿಸಲಾಗಿರುವ ಕಾರ್ಯಕ್ರಮಗಳಿಗೆ ಅನುಗುಣವಾಗಿ ಜಾನಪದ ಪ್ರಕಾರಗಳಿಗೆ ಶಿಬಿರವನ್ನು ಏರ್ಪಡಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬೆಳಗಾವಿ ಇವರ ಕಚೇರಿ ದೂರವಾಣಿ ಸಂಖ್ಯೆ 0831–2950306ರ ಮೂಲಕ ಸಂಪರ್ಕಿಸಬಹುದಾಗಿದೆ.

### ವಜ್ರಮಹೋತ್ಸವ ಆಚರಣೆಗೆ ಸಿದ್ಧವಾಗಿದೆ ಶಿಗ್ಲಿಯ ಗ್ರಾಮ ಭಾರತಿ ಶಿಕ್ಷಣ ಸಮಿತಿ

# ಗ್ರಾಮೀಣ ಭಾಗದಲ್ಲಿ ಶಿಕ್ಷಣ ಕ್ರಾಂತಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗ್ರಾಮೀಣ ಭಾಗದಲ್ಲಿ ಶೈಕ್ಷಣಿಕವಾಗಿ ವಿಶಿಷ್ಟ ಹೆಸರು ಮಾಡಿರುವ ಶಿಗ್ಲಿಯ ಗ್ರಾಮ ಭಾರತಿ ಶಿಕ್ಷಣ ಸಮಿತಿಯು ಗ್ರಾಮ ಸೇರಿದಂತೆ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಉತ್ತಮ ಶಿಕ್ಷಣ ನೀಡುವ ಸಂಸ್ಥೆಯಾಗಿ ನೆಲೆನಿಂತು ಇದೀಗ ವಜ್ರಮಹೋತ್ಸವವನ್ನು ಆಚರಿಸಿಕೊಳ್ಳುತ್ತಿರುವದು ಈ ಭಾಗದ ಎಲ್ಲ ಶಿಕ್ಷಣಪ್ರೇಮಿಗಳಿಗೆ ಸಂತಸದ ಸಂಗತಿಯಾಗಿದೆ ಎಂದು ಶಿಗ್ಲಿ ಗ್ರಾಮ ಭಾರತಿ ಶಿಕ್ಷಣ ಸಮಿತಿಯ ಉಪಾಧ್ಯಕ್ಷ ಸೋಮಣ್ಣ ಡಾಣಗಲ್, ಸದಸ್ಯ ಎಸ್.ಪಿ. ಬಳಿಗಾರ ಹೇಳಿದರು.

ಅವರು ಶಿಗ್ಲಿ ಗ್ರಾಮದ ಎಸ್.ಎಸ್. ಕೂಡ್ಲಮಠ ಶಾಲೆಯಲ್ಲಿ ಕರೆಯಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು. 1964ರಲ್ಲಿ ಜನ್ಮ ತಳೆದ ಗ್ರಾಮ ಭಾರತಿ ಶಿಕ್ಷಣ ಸಮಿತಿಗೆ ರಾಷ್ಟ್ರಕವಿ ರವಿಂದ್ರನಾಥ ಟ್ಯಾಗೂರ ಅವರ ವಿಶ್ವಭಾರತಿ ಮಾದರಿಯಲ್ಲಿ ಗ್ರಾಮ ಭಾರತಿ ಶಿಕ್ಷಣ ಸಮಿತಿಯನ್ನು ಅನೇಕ ಶಿಕ್ಷಣ ಪ್ರೇಮಿಗಳು, ಹಿರಿಯರು ಸೇರಿ ಹುಟ್ಟು ಹಾಕಿದ್ದು, ಅಂದು ಎಸ್.ಎಸ್. ಕೂಡ್ಲಮಠ ಶಾಲೆಯನ್ನು ಪ್ರಾರಂಭಿಸುವ ಮೂಲಕ ಶಿಕ್ಷಣ ಕ್ಷೇತ್ರಕ್ಕೆ ಅಡಿ ಇರಿಸಿದರು. ಅಲ್ಲಿಂದ 60 ಸಂವತ್ಸರಗಳಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ಕ್ರಾಂತಿ ಎನ್ನುವಂತೆ ಸಂಸ್ಥೆ ಬೆಳೆದು ನಿಲ್ಲುವಂತಾಗಿದೆ ಎಂದು ಹೇಳಿದರು.

ಶಿಗ್ಲಿ ಗ್ರಾಮದ ಹಿರಿಯರು, ಆಧ್ಯಾತ್ಮ ಜೀವಿಗಳೂ ಆಗಿದ್ದ ದಿ.ಮುರಗಯ್ಯನವರು ಕೂಡ್ಲಮಠ ತಮ್ಮ ತಂದೆಯವರಾದ



ದಿ.ಸಿದ್ದಯ್ಯನವರು ಕೂಡ್ಲಮಠ ಇವರ ಸ್ಮರಣಾರ್ಥ 25 ಸಾವಿರ ರೂ ಹಾಗೂ 6.20 ಎಕರೆ ಭೂಮಿಯನ್ನು ದಾನವಾಗಿ ನೀಡಿದ್ದರಿಂದ ಎಸ್.ಎಸ್. ಕೂಡ್ಲಮಠ ಮಾಧ್ಯಮಿಕ ಶಾಲೆ ಎಂದು ನಾಮಕರಣ ಮಾಡಲಾಯಿತು. ಅಂದು ಸಣ್ಣ ಕಟ್ಟಡದಲ್ಲಿದ್ದ ಶಾಲೆ ಸಂಸದರು, ಶಾಸಕರು ಮತ್ತು ಅನೇಕ ದಾನಿಗಳು, ಹಳೆಯ ವಿದ್ಯಾರ್ಥಿಗಳ ಸಹಾಯಹಸ್ತದಿಂದ ಸುಮಾರು 7 ಕೋಟಿ ರೂ.ಗಳ ವೆಚ್ಚದಲ್ಲಿ ಸುಂದರವಾದ ಮತ್ತು ಭವ್ಯವಾದ ಕಟ್ಟಡವನ್ನು 2007ರಲ್ಲಿ ಇಂದಿನ ಸಭಾಪತಿ, ಅಂದಿನ ಶಿಕ್ಷಣ ಸಚಿವ ಬಿ.ಎಸ್. ಹೊರಟ್ಟಿ, ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪನವರು ಉದ್ಘಾಟಿಸಿದರು. ಪ್ರಾರಂಭದಲ್ಲಿ ಬೆರಳೆಣಿಕೆಯಷ್ಟಿದ್ದ ವಿದ್ಯಾರ್ಥಿಗಳ ಸಂಖ್ಯೆ ಗುಣಮಟ್ಟದ ಶಿಕ್ಷಣದಿಂದ ಸಾವಿರಾರು ಸಂಖ್ಯೆಯನ್ನು ತಲುಪಿರುವದು ನಮ್ಮ ಸಂಸ್ಥೆಗೆ ಹೆಮ್ಮೆಯ ವಿಷಯವಾಗಿದೆ ಎಂದರು.

ಈ ಶಾಲೆಯಲ್ಲಿ ಕಲಿತ ಅನೇಕ ವಿದ್ಯಾರ್ಥಿಗಳು ಐಎಎಸ್, ಕೆಎಎಸ್, ಡಾಕ್ಟರ್, ಇಂಜಿನಿಯರ್, ಪೊಲೀಸ್ ಇಲಾಖೆ, ಶಿಕ್ಷಣ ಇಲಾಖೆ, ರಾಜ್ಯ ಹಾಗೂ ಕೇಂದ್ರ ಸರಕಾರಗಳಲ್ಲಿ ಉದ್ಯೋಗ ಮಾಡುತ್ತಿದ್ದು, ಅನೇಕರು ಉದ್ಯಮಿಗಳಾಗಿ ಹೆಸರು ಮಾಡಿದ್ದಾರೆ.

ಶಾಲೆಯು ಇಂದು ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ಕ್ರೀಡೆ, ಶಿಕ್ಷಣದಲ್ಲಿ ವಿಶೇಷ ಸಾಧನೆಗಳನ್ನು ಮಾಡಿ ಗಮನ ಸೆಳೆಯುತ್ತಿದೆ. ಇದೇ ಜ.27ರಂದು ಶಾಲೆಯ ಆವರಣದಲ್ಲಿ ಅದ್ದೂರಿ ಕಾರ್ಯಕ್ರಮ ಏರ್ಪಡಿಸಿದ್ದು, ನಾಡಿನ ಅನೇಕ ಗಣ್ಯರು ಇದರಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಸಂಸ್ಥೆಯ ಅಧ್ಯಕ್ಷ ಎನ್.ಸಿ. ಹುನಗುಂದ, ಗೌ.ಕಾರ್ಯದರ್ಶಿ ಸಿ.ಎಂ. ರಾಗಿ, ಡಾ. ಎಸ್.ಎಂ. ಕೂಡ್ಲಮಠ, ಎಸ್.ಜೆ. ಯಲಿಗಾರ, ಎಚ್.ಎಫ್. ತಳವಾರ, ವೀರಣ್ಣ ಪವಾಡದ, ಎಫ್.ಕೆ. ಕಾಳಪ್ಪನವರ, ಎಸ್.ಎನ್. ಕಳ್ಳಿಹಾಳ, ಡಿ.ವಾಯ್. ಹುನಗುಂದ, ಬಿ.ಎಫ್. ತೋಟದ, ಬಿ.ಎಂ. ಕಳಸದ, ಎಮ್.ಎಫ್. ಹುಲಗೂರ, ಹಾಗೂ ಮುಖ್ಯೋಪಾಧ್ಯಾಯ ಸಿ.ಬಿ. ಮೊಗಲಿ ಹಾಜರಿದ್ದರು.

> ರಾಜ್ಯದ ಪ್ರತಿಷ್ಠಿತ ಮನೆತನಗಳಲ್ಲಿ ಒಂದಾಗಿರುವ ಬಳಿಗಾರ ಕುಟುಂಬದ ಡಾ.ಮನು ಬಳಿಗಾರ, ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಡಾ.ಶಂಭು ಬಳಿಗಾರ, ಲೋಕಾಯುಕ್ತ ಪೊಲೀಸ್ ಇಲಾಖೆಯಲ್ಲಿ ಎಸ್.ಪಿ. ಆಗಿರುವ ಶಂಕರ ರಾಗಿ, ಅರಣ್ಯ ಇಲಾಖೆಯ ಅಧಿಕಾರಿ ಮಂಜುನಾಥ ನಾವಿ ಸೇರಿದಂತೆ ಅನೇಕರು ಈ ಶಾಲೆಯ ಹಳೆಯ ವಿದ್ಯಾರ್ಥಿಗಳು ಎಂದು ಹೇಳಿಕೊಳ್ಳಲು ಹೆಮ್ಮೆ ಎನಿಸುತ್ತದೆ. ಇಂತಹ ಪ್ರತಿಷ್ಠಿತ ಗ್ರಾಮೀಣ ಭಾಗದ ಶಿಕ್ಷಣ ಸಂಸ್ಥೆಯಾಗಿರುವ ಜಿಎಸ್ಎಸ್ ಸಂಸ್ಥೆಯು ಇದೀಗ ವಜ್ರಮಹೋತ್ಸವವನ್ನು ಆಚರಿಸಿಕೊಳ್ಳಲು ಸಿದ್ಧವಾಗಿದೆ ಎಂದು ಸಂಸ್ಥೆಯ ಉಪಾಧ್ಯಕ್ಷರು ತಿಳಿಸಿದರು

### ಶಿಕ್ಷಕರಿಂದಲೇ ನವೀಕರಣಗೊಂಡ ಸಿಆರ್‌ಸಿ ಕೇಂದ್ರಕ್ಕೆ ಶಾಸಕ ಡಾ.ಚಂದ್ರು ಲಮಾಣಿ ಮೆಚ್ಚುಗೆ

# ಶಿಕ್ಷಕರ ವೃತ್ತಿ ಗೌರವ ಮಾದರಿಯಾಗಿದೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶಿಕ್ಷಣ ಸೇವೆಯೇ ದೇವರ ಸೇವೆ ಎಂಬ ಸದ್ಭಾವನೆಯಿಂದ ಸೇವೆ ಸಲ್ಲಿಸುವ ಶಿಕ್ಷಕರು ಸಮಾಜದ ಬೆಳಕಾಗಿದ್ದು, ದೇಶದ ಪ್ರಗತಿಯ ದಿಕ್ಸೂಚಿಯಾಗಿದ್ದಾರೆ ಎಂದು ಶಾಸಕ ಡಾ.ಚಂದ್ರು ಲಮಾಣಿ ಹೇಳಿದರು.



ಅವರು ಬುಧವಾರ ತಾಲೂಕಿನ ಪು.ಬಡ್ನಿ ಗ್ರಾಮದಲ್ಲಿ ಶಿಕ್ಷಕರ ಕಳಕಳಿಯಿಂದ ನವೀಕರಣಗೊಂಡ ಸಮೂಹ ಸಂಪನ್ಮೂಲ ಕೇಂದ್ರ(ಸಿಆರ್‌ಸಿ)ದ ಕಟ್ಟಡ ಉದ್ಘಾಟಿಸಿ ಮಾತನಾಡಿ, ಲಕ್ಷ್ಮೇಶ್ವರ ತಾಲೂಕಿನಲ್ಲಿ ಹಲವಾರು ವರ್ಷಗಳಿಂದ ಪಾಳು ಬಿದ್ದಿರುವ ಸಿಆರ್‌ಸಿ ಕೇಂದ್ರದ ಕಟ್ಟಡಗಳನ್ನು ಸರ್ಕಾರದ ಅನುದಾನವಿಲ್ಲದೇ ಸ್ವತಃ ಶಿಕ್ಷಕರೇ ಸ್ವಯಂ ಪ್ರೇರಣೆಯಿಂದ ಹಣ ಕ್ರೋಢೀಕರಿಸಿ, ನವೀಕರಣಗೊಳಿಸುತ್ತಿರುವ ಕಾರ್ಯ ಶ್ಲಾಘನೀಯ. ಶಿಕ್ಷಕರ ಈ ವೃತ್ತಿ ಗೌರವ, ಸೇವಾ ಮನೋಭಾವ ಮತ್ತು ಸಮನ್ವಯತೆ ಸಮಾಜಕ್ಕೆ ಮಾದರಿಯಾಗಿದೆ ಎಂದರು.

ಬಿಇಓ ಜಿ.ಎಂ ಮುಂದಿನಮನಿ ಮಾತನಾಡಿ, ಶಾಲೆ ಮತ್ತು ಶಿಕ್ಷಣ ಇಲಾಖೆ ಕಟ್ಟಡವನ್ನು ದೇವಾಲಯವೆಂದು, ಮಕ್ಕಳೇ ದೇವರೆಂಬ ಭಾವನೆ ಹೊಂದಿರುವ ಶಿಕ್ಷಕರು ನಮ್ಮ ಸಲಹೆಯನ್ನು ಪ್ರೀತಿಯಿಂದ ಸ್ವೀಕರಿಸಿ ಕ್ಷೇತ್ರವ್ಯಾಪ್ತಿಯಲ್ಲಿ ಶಿಥಿಲಗೊಳ್ಳುತ್ತಿರುವ ಸಿಆರ್‌ಸಿ ಕಟ್ಟಡಗಳನ್ನು ತಮ್ಮ ಸ್ವಂತದ ಮತ್ತು ಅಲ್ಪದಾನಿಗಳ ಸಹಾಯದಿಂದ ಅಭಿವೃದ್ಧಿಗೊಳಿಸುವ ಮೂಲಕ ಇಲಾಖೆಗೆ ಅಳಿಲು ಸೇವೆ ಸಲ್ಲಿಸಿರುವುದು ಖುಷಿ ತಂದಿದೆ. ಪಾಲುದಾರ ಎಲ್ಲ ಸಿಆರ್‌ಪಿ ಮತ್ತು ಶಿಕ್ಷಕ ವೃಂದಕ್ಕೆ ಅಭಿನಂದನೆ ಸಲ್ಲಿಸುವೆ ಎಂದರು.

ಗ್ರಾ.ಪಂ ಅಧ್ಯಕ್ಷೆ ಪ್ರೇಮಕ್ಕ ಮಾದರ, ಎಸ್‌ಡಿಎಂಸಿ ಅಧ್ಯಕ್ಷ ರಮೇಶ ಮರಿಹೊಳಲಣ್ಣನವರ, ಶಿಕ್ಷಣಾಧಿಕಾರಿಗಳ ಸಂಘದ ಅಧ್ಯಕ್ಷ ಎಂ.ಬಿ. ಹೊಸಮನಿ, ಡಿ.ಎಚ್. ಪಾಟೀಲ, ಬಿ.ಎಸ್. ಹರ್ಲಾಪೂರ, ಬಿಆರ್‌ಪಿ ಈಶ್ವರ ಮೆಡ್ಲೇರಿ, ಬಿ.ಎಂ. ಯರಗುಪ್ಪಿ, ವಾಸು ದೀಪಾಲಿ, ಚಂದ್ರಕಾಂತ ನೇಕಾರ, ಎಲ್.ಎನ್. ನಂದೆಣ್ಣವರ, ಡಿ.ಡಿ. ಲಮಾಣಿ, ಬಿ.ಬಿ. ಯತ್ತಿನಹಳ್ಳಿ, ವೈ.ಎಸ್. ತಿರಕಣ್ಣವರ, ಸಿಆರ್‌ಪಿ ಸಿ.ವಿ. ವಡಕಣ್ಣವರ, ಜಿ.ಆರ್. ಪಾಟೀಲ, ಎನ್.ಎನ್. ಸಾವಿರಕುರಿ, ಗಿರೀಶ ನೇಕಾರ, ಕೆಂಚಮ್ಮ ಕಂಬಳಿ, ಜ್ಯೋತಿ ಗಾಯಕವಾಡ, ಉಮೇಶ ನೇಕಾರ, ಸತೀಶ ಬೋಮಲೆ, ಎಲ್.ಎಫ್. ಮಠದ, ತಿರಕಪ್ಪ ಪೂಜಾರ, ಎಸ್.ಎನ್. ಪಶುಪತಿಹಾಳ, ಎನ್.ಎ. ಮುಲ್ಲಾ, ಎ.ಡಿ. ಸೋಮನಕಟ್ಟಿ ಸೇರಿ ಎಸ್‌ಡಿಎಂಸಿ ಮತ್ತು ಗ್ರಾ.ಪಂ ಸದಸ್ಯರು, ಶಿಕ್ಷಕರು ಇದ್ದರು.

> ಲಕ್ಷ್ಮೇಶ್ವರದ ಘಟಗಾಂವ ಬಡ್ನಿ ಗ್ರಾಮದಲ್ಲಿ ಸ್ಥಾಪಿಸಿದ ಸಮೂಹ ಸಂಪನ್ಮೂಲ ಕೇಂದ್ರವು ಕಳೆದ ಹಲವು ವರ್ಷಗಳಿಂದ ಪಾಳು ಬಿದ್ದು ಶಿಥಿಲಾವಸ್ಥೆ ತಲುಪಿತ್ತು. ಈ ಕಟ್ಟಡಗಳನ್ನು ದುರಸ್ತಿಪಡಿಸುವ ಬಗ್ಗೆ ಬಿಇಓ ಮತ್ತು ಬಿಆರ್‌ಪಿಗಳು ನೀಡಿದ ಸಲಹೆ–ಸೂಚನೆಯಿಂದ ಪ್ರೇರಿತರಾದ ಕ್ಲಸ್ಟರ್ ಸಿಆರ್‌ಪಿ ಗಿರೀಶ ನೇಕಾರ ಅವರು ತಮ್ಮ ಕ್ಲಸ್ಟರ್ ವ್ಯಾಪ್ತಿಯ ಶಿಕ್ಷಕರ ಸಹಕಾರದಿಂದ 1.15 ಲಕ್ಷ ರೂ ವೆಚ್ಚದಲ್ಲಿ ಈ ಕಟ್ಟಡಕ್ಕೆ ಜೀವಕಳೆ ನೀಡುವಲ್ಲಿ ಯಶಸ್ವಿಯಾಗಿದ್ದಾರೆ. ದೊಡ್ಡೂರ ಮತ್ತು ಬೆಳ್ಳಟ್ಟಿ, ಹೆಬ್ಬಾಳ ಕ್ಲಸ್ಟರಿನ ಕಟ್ಟಡಗಳು ನವೀಕರಣಗೊಂಡಿವೆ. ಶಿಗ್ಲಿ, ಲಕ್ಷ್ಮೇಶ್ವರ, ಸೂರಣಗಿಯಲ್ಲಿನ ಸಿಆರ್‌ಸಿ ಕಟ್ಟಡ ನವೀಕರಣಗೊಳ್ಳುತ್ತಿವೆ.



■ವಿಜಯಸಾಕ್ಷಿ ಸುದ್ದಿ, ಗದಗ

ರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆ ಸಮಾರಂಭದಲ್ಲಿ ಕ್ರೀಡಾ ಕ್ಷೇತ್ರದಲ್ಲಿ ಸಾಧನೆಗೈದ ಗದಗ ಜಿಲ್ಲೆಯ ಮುಂಡರಗಿ ಪಟ್ಟಣದ ಸುಪ್ರಿಯ ಇಟಗಿ ಇವರಿಗೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಕೊಡಮಾಡುವ ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿ ಯೋಜನೆಯಡಿಯಲ್ಲಿ 2023–24ರ ಸಾಲಿಗೆ ಗದಗ ಜಿಲ್ಲಾ ಮಟ್ಟದ ಅಸಾಧಾರಣ ಪ್ರತಿಭಾ ಪುರಸ್ಕಾರ ಪ್ರಶಸ್ತಿಯನ್ನು 10ಸಾವಿರ ರೂ. ನಗದು ಪುರಸ್ಕಾರದೊಂದಿಗೆ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾ ನ್ಯಾಯಾಧೀಶರಾದ ಕೆ. ಗುರುಪ್ರಸಾದ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಸೇರಿದಂತೆ ಅನೇಕ ಅಧಿಕಾರಿಗಳು ಇದ್ದರು.

# ಮತದಾನದ ಮೂಲಕ ಸದೃಢ ದೇಶ ನಿರ್ಮಾಣ ಮಾಡಿ




■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಅತ್ಯಂತ ಮಹತ್ತರ ಸ್ಥಾನ ಪಡೆದಿರುವ ಮತದಾನದಿಂದ ನಾವು ದೂರ ಉಳಿಯದೆ, ಮತದಾನದ ಹಕ್ಕನ್ನು ಚಲಾಯಿಸಿ ಸದೃಢ ದೇಶ ನಿರ್ಮಾಣಕ್ಕೆ ಕೊಡುಗೆ ನೀಡಬೇಕು ಎಂದು ತಾಪಂ ಇಒ ಡಾ. ಡಿ.ಮೋಹನ್ ಹೇಳಿದರು.

ಇಲ್ಲಿನ ಎಸ್.ಎಂ. ಭೂಮರಡ್ಡಿ ಕಾಲೇಜಿನಲ್ಲಿ ತಾಲೂಕು ಸ್ವೀಪ್ ಸಮಿತಿ, ತಾಲೂಕು ಆಡಳಿತ, ಪುರಸಭೆ, ಪೊಲೀಸ್ ಇಲಾಖೆ, ಸರ್ಕಾರಿ ಪ್ರೌಢಶಾಲೆ ಹಾಗೂ ಎಸ್.ಎಂ. ಭೂಮರಡ್ಡಿ ಪ್ರೌಢಶಾಲೆ ಸಹಯೋಗದಲ್ಲಿ ಗುರುವಾರ ನಡೆದ ರಾಷ್ಟ್ರೀಯ ಮತದಾರರ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರತಿಜ್ಞಾವಿಧಿ ಬೋಧಿಸಿ ಮಾತನಾಡಿದರು.

ದೇಶದಲ್ಲಿ ಮತದಾನ ಪ್ರಮುಖ ಹಕ್ಕುಗಳಲ್ಲಿ ಒಂದಾಗಿದ್ದು, ಪ್ರಜೆಗಳಿಂದ ಆಯ್ಕೆಯಾದ ಸರ್ಕಾರ ಜನರ ಆಶೋತ್ತರಗಳಂತೆಯೇ ನಡೆಯಬೇಕು ಎಂಬುದು ಸಂವಿಧಾನದ ನಿಯಮ. ತಮ್ಮ ಒಳಿತು ಬಯಸುವ ಜನ ನಾಯಕನನ್ನು ಆಯ್ಕೆ ಮಾಡಲು ಮತದಾನ ಪ್ರಕ್ರಿಯೆ ನಡೆಯುತ್ತದೆ. ಮತದಾನದ ಪ್ರಾಮುಖ್ಯತೆ ಮತ್ತು ಪ್ರಜೆಗಳ ಮೇಲಿರುವ ಜವಾಬ್ದಾರಿಯ ಕುರಿತು ಜಾಗೃತಿ ಮೂಡಿಸಲು ಪ್ರತಿ ವರ್ಷ ಜ.25ರಂದು ರಾಷ್ಟ್ರೀಯ ಮತದಾರರ ದಿನವನ್ನು ಆಚರಿಸಲಾಗುತ್ತದೆ ಎಂದರು.

ತಹಸೀಲ್ದಾರ್ ಕಿರಣಕುಮಾರ ಕುಲಕರ್ಣಿ ಮಾತನಾಡಿ, 18 ವರ್ಷ ತುಂಬಿದ ಯುವ ಮತದಾರರು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು. ಯಾವುದೇ ಕಾರಣಕ್ಕೂ ನೋಂದಾಯಿಸಿಕೊಳ್ಳಲು ಹಿಂಜರಿಯಬೇಡಿ. ಮತದಾನದ ಮಹತ್ವ ತಿಳಿಸಲು ಪ್ರತಿ ವರ್ಷ ಮತದಾರರಿಗೆ ಜಾಗೃತಿ ಮೂಡಿಸುವ ಮೂಲಕ ಪ್ರಜಾಪ್ರಭುತ್ವವನ್ನು ಗಟ್ಟಿಗೊಳಿಸಲಾಗುತ್ತಿದೆ ಎಂದರು.

ಈ ವೇಳೆ ಪುರಸಭೆ ಪ್ರಭಾರಿ ಮುಖ್ಯಾಧಿಕಾರಿ ಬಸವರಾಜ ಬಳಗಾನೂರು, ಎಸ್.ಎಂ. ಭೂಮರಡ್ಡಿ ಪ್ರೌಢಶಾಲೆ ಹಾಗೂ ಕಾಲೇಜಿನ ಪ್ರಾಚಾರ್ಯರು, ಮುಖ್ಯೋಪಾಧ್ಯಾಯರು, ಶಿಕ್ಷಕರು, ಸರ್ಕಾರಿ ಬಾಲಕ ಹಾಗೂ ಬಾಲಕಿಯರ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರು, ಸಿಬ್ಬಂದಿಗಳು, ತಾಲೂಕು ಪಂಚಾಯತ, ತಾಲೂಕ ಆಡಳಿತ, ಪುರಸಭೆಯ ಸಿಬ್ಬಂದಿಗಳು ಹಾಜರಿದ್ದರು.

## ಹಳೆಯ ವಿದ್ಯಾರ್ಥಿಗಳ ಸಂಘದ ಸಭೆ ನಾಳೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಕೆಎಲ್ಇ ಸಂಸ್ಥೆಯ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯದಲ್ಲಿ ಜ. 27ರಂದು ಬೆಳಿಗ್ಗೆ 11 ಗಂಟೆಗೆ ಮಹಾವಿದ್ಯಾಲಯದ ಹಳೆಯ ವಿದ್ಯಾರ್ಥಿಗಳ ಸಂಘದ ಸಭೆಯನ್ನು ಕರೆಯಲಾಗಿದೆ. ಎಲ್ಲ ಹಳೆಯ ವಿದ್ಯಾರ್ಥಿಗಳು ಸಮಯಕ್ಕೆ ಸರಿಯಾಗಿ ಹಾಜರಿದ್ದು, ಮಹಾವಿದ್ಯಾಲಯದ ಪ್ರಗತಿಗೆ ಪೂರಕವಾದ ತಮ್ಮ ಅಮೂಲ್ಯವಾದ ಅಭಿಪ್ರಾಯ, ಸಲಹೆ–ಸೂಚನೆಗಳನ್ನು ನೀಡುವ ಮೂಲಕ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ಎ.ಕೆ. ಮಠ ಹಾಗೂ ಸಂಘದ ಕಾರ್ಯದರ್ಶಿ ಪ್ರೊ. ವೀಣಾ ತಿರ್ಲಾಪುರ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ತೋಟಗಾರಿಕೆ ಇಲಾಖೆಯಿಂದ 2023–24ನೇ ಸಾಲಿಗೆ ತರಕಾರಿ ಬೀಜಗಳ ಹೈಬ್ರೀಡ್ ಹಾಗೂ ಸುಧಾರಿತ ತಳಿ ವಿತರಣೆ ಎಂಬ ಕಾರ್ಯಕ್ರಮವನ್ನು ಸಮಗ್ರ ತೋಟಗಾರಿಕೆ ಅಭಿವೃದ್ಧಿ ಯೋಜನೆಯಡಿ ತರಕಾರಿ ಬೀಜಗಳನ್ನು ನೀರಾವರಿ ಸೌಲಭ್ಯವಿರುವ ಸಣ್ಣ & ಅತಿ ಸಣ್ಣ ರೈತರು, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ, ಮಹಿಳಾ ಫಲಾನುಭವಿಗಳಿಗೆ ವಿತರಿಸಲು ಅರ್ಜಿ ಆಹ್ವಾನಿಸಲಾಗಿದೆ.

ಯೋಜನೆಯ ಸದುಪಯೋಗ ಪಡೆದುಕೊಳ್ಳಲು ಆಸಕ್ತ ರೈತರು ತಾಲೂಕಿನ ತೋಟಗಾರಿಕೆ ಇಲಾಖೆಗೆ ಬಂದು ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಜೊತೆಗೆ ಪ್ರಸಕ್ತ ಸಾಲಿನ ಉತಾರ (ಖಖಿಅ), ನೀರಾವರಿ ಸರ್ಟಿಫಿಕೆಟ್, ಆಧಾರ್ ಕಾರ್ಡ್, ಓಟರ್ ಐಡಿ, ಬ್ಯಾಂಕ್ ಪಾಸ್‌ಬುಕ್ ಹಾಗೂ ಪ.ಜಾತಿ/ಪ.ಪಂಗಡ ರೈತರು ಜಾತಿ ಪ್ರಮಾಣ ಪತ್ರ ನಕಲು ಪ್ರತಿ ಸಲ್ಲಿಸುವುದು ಎಂದು ಗದಗ ತಾಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರಾದ (ಜಿ.ಪಂ) ಶೈಲೇಂದ್ರ ಬಿರಾದಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆ ಕಾರ್ಯಕ್ರಮದಲ್ಲಿ ರವಿ.ಎ.ಎನ್ ಅಭಿಮತ

# ಹೆಣ್ಣಿನ ಶ್ರೇಯೋಭಿವೃದ್ಧಿಗಾಗಿ ಶ್ರಮಿಸಿ

■ವಿಜಯಸಾಕ್ಷಿ ಸುದ್ದಿ, ರೋಣ

ಹೆಣ್ಣು ಜ್ಞಾನ ಮತ್ತು ದಿವ್ಯತೆಯ ಸಂಕೇತ. ಈ ಅರಿವು ಸಮಾಜದ ಎಲ್ಲ ಹಂತದಲ್ಲೂ ಕಂಡು ಬರಬೇಕಾದ ಅಗತ್ಯವಿದೆ ಎಂದು ರೋಣ ತಾ.ಪಂ ಕಾರ್ಯ ನಿರ್ವಾಹಕ ಅಧಿಕಾರಿ ರವಿ ಎ.ಎನ್ ಅಭಿಪ್ರಾಯಪಟ್ಟರು.

ಪಟ್ಟಣದ ಗುರು ಭವನದಲ್ಲಿ ಕೂಸಿನ ಮನೆ ಆರೈಕೆದಾರರಿಗೆ ನಡೆದ ಎರಡನೇ ದಿನದ ತರಬೇತಿಯಲ್ಲಿ, ಅವರು ಮಾತನಾಡಿದರು.

ಹೆಣ್ಣು ತನ್ನ ಗರಿಷ್ಠ ಸಾಮರ್ಥ್ಯವನ್ನು ಪ್ರಕಟಪಡಿಸಲು ಅನುಕೂಲಕರವಾದ ವಾತಾವರಣ ಸೃಷ್ಟಿ ಮಾಡಲು ಎಲ್ಲರೂ ಪ್ರಯತ್ನಿಸಬೇಕು. ಆರೋಗ್ಯ, ಶಿಕ್ಷಣ, ಸ್ವಚ್ಛತೆ ಮುಂತಾದ ಎಲ್ಲಾ ಆಯಾಮಗಳಲ್ಲೂ ಕೂಡ ಹೆಣ್ಣಿನ ಶ್ರೇಯೋಭಿವೃದ್ಧಿಗಾಗಿ ಬೇಕಾದ ಕ್ರಮಗಳನ್ನು ಸಮಾಜ ಆಲೋಚಿಸಿ ಕಾರ್ಯಪ್ರವೃತ್ತವಾಗಬೇಕು ಎಂದರು.

ಎಲ್ಲರೂ ಸಮಾನ ಎಂಬಂತೆ ಸಮಾಜದಲ್ಲಿ ಬದಲಾವಣೆ ಆಗಬೇಕು. ಅಂತಹ ಸವಾಲನ್ನು ಸಮರ್ಪಕವಾಗಿ ಮತ್ತು ಧೈರ್ಯವಾಗಿ ಎದುರಿಸುವ ಶಕ್ತಿ ಹೆಣ್ಣು ಮಕ್ಕಳಿಗೆ ಬರಬೇಕು ಎಂದರೆ ಹೆಣ್ಣು ಶಿಕ್ಷಣದಿಂದ ವಂಚಿತರಾಗಬಾರದು. ಹೆಣ್ಣು ಮಕ್ಕಳು ಕ್ರೀಡೆ,



ಶಿಕ್ಷಣ, ವಿಜ್ಞಾನ, ಸಂಸ್ಕೃತಿ, ಆಡಳಿತ, ರಾಜಕೀಯ ಮುಂತಾದ ಕ್ಷೇತ್ರದಲ್ಲಿ ಗಣನೀಯ ಸಾಧನೆ ಮಾಡುವ ಹಾಗೆ ಆಗಬೇಕು ಎಂದರು.

ಈ ಸಂದರ್ಭದಲ್ಲಿ ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ) ರಿಯಾಜ ಖತೀಬ್, ಸಹಾಯಕ ನಿರ್ದೇಶಕರು (ಪಂಚಾಯತ ರಾಜ್) ಶಿವಯೋಗಿ ರಿತ್ತಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಮಂಜುಳಾ ಗುರಾಣಿ, ಖಿಓಖಖ ಪ್ರವೀಣಕುಮಾರ ಗಾಮನಗಟ್ಟಿ, ಅಬ್ಬಿಗೇರಿ, ಹೊಸಳ್ಳಿ, ಕುರಹಟ್ಟಿ, ಕೌಜಗೇರಿ, ಬೆಳವಣಿಕಿ, ಹೊಳೆ ಆಲೂರು, ಹೊಳೆಮಣ್ಣೂರು, ಸವಡಿ, ಯಾವಗಲ್ ಗ್ರಾಮ ಪಂಚಾಯತಿಯ ಕೂಸಿನ ಮನೆ ಆರೈಕೆದಾರರು ಭಾಗವಹಿದ್ದರು. ತಾ.ಪಂ ಐಇಸಿ ಕೊ–ಅರ್ಡಿನೇಟರ್ ಮಂಜುನಾಥ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

> ಜಿಲ್ಲಾ ಐಇಸಿ ಸಂಯೋಜಕ ವೀರಭದ್ರಪ್ಪ ಸಜ್ಜನ ಮಾತನಾಡಿ, ಹೆಣ್ಣು ಮಕ್ಕಳಿಗೆ ಶಿಕ್ಷಣ ಕೊಡುವ ವಿಚಾರದಲ್ಲಿ ಹೆಣ್ಣು ಹೆತ್ತ ಪಾಲಕರಲ್ಲಿ ಕೀಳರಿಮೆ ಬೇಡ. ಹೆಣ್ಣು ಭೂತಾಯಿಗೆ ಸರಿಸಮವಾಗಿದ್ದು, ಹೆಣ್ಣನ್ನು ಗೌರವಿಸುವದು ಸಮಾಜದ ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದರು.

# ಹುತಾತ್ಮ ಯೋಧನ ಸ್ಮಾರಕ ಉದ್ಘಾಟನೆ ಇಂದು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಇಲ್ಲಿನ ಅಬ್ಬಿಗೇರಿ ಗ್ರಾಮದ ಬಸ್ ನಿಲ್ದಾಣ ಹತ್ತಿರದ ಸೈನಿಕ ಸ್ಮಾರಕ ಸ್ಥಳದಲ್ಲಿ ಜ.26ರಂದು ಮುಂಜಾನೆ 10.15ಕ್ಕೆ ಸ್ಥಳೀಯ ಗೆಳೆಯರ ಬಳಗ ಹಾಗೂ ಸೈನಿಕ ಬಳಗ ಇವರ ಸಂಯುಕ್ತ ಆಶ್ರಯದಲ್ಲಿ ಹುತಾತ್ಮ ಯೋಧ ಮಂಜುನಾಥ ಕ.ನೀರಲೋಟಿಯವರ ಸ್ಮರಣಾರ್ಥ ಮೂರ್ತಿ ಅನಾವರಣ ಹಾಗೂ ಸ್ಮಾರಕ ಉದ್ಘಾಟನೆ ಕಾರ್ಯಕ್ರಮ ನಡೆಯಲಿದೆ.

ತರುಣ ಸಂಘದ ಅಧ್ಯಕ್ಷ ಡಾ. ಆರ್.ಬಿ. ಬಸವರಡ್ಡೇರ ಕಾರ್ಯಕ್ರಮ ಉದ್ಘಾಟಿಸುವರು. ಗದುಗಿನ ಅ.ಕ ಮಾಜಿ ಸೈನಿಕರ ಸಂಘದ ಗೌರವ ಅಧ್ಯಕ್ಷ ಶಿವಪುತ್ರಪ್ಪ ಸಂಗನಾಳ ಸ್ಮಾರಕ ಲೋಕಾರ್ಪಣೆಗೊಳಿಸುವರು. ರೋಣದ ಮಾಜಿ ಸೈನಿಕರ ಸಂಘದ ಗೌರವ ಅಧ್ಯಕ್ಷ ರಂಗಪ್ಪ ತಳವಾರ ಅಧ್ಯಕ್ಷತೆ ವಹಿಸುವರು.

ಸಂಘದ ಜಿಲ್ಲಾಧ್ಯಕ್ಷ ಬಸಲಿಂಗಪ್ಪ ಮುಂಡರಗಿ, ಗ್ರಾ.ಪಂ ಅಧ್ಯಕ್ಷ ನೀಲಪ್ಪ ದ್ವಾಸಲ, ಉಪಾಧ್ಯಕ್ಷೆ ರೇಣಮ್ಮ ಹಳ್ಳಿ, ಕಳಕಪ್ಪ ನೀರಲೋಟಿ ಹಾಗೂ ಕುಟುಂಬ ಸದಸ್ಯರು, ಪ್ರಭುಗೌಡ ಪಾಟೀಲ, ಎನ್.ಆರ್. ದೇವಾಂಗಮಠ, ಚನ್ನಬಸಪ್ಪ ನೆಲಗುಡ್ಡ, ಬಿ.ಎಸ್. ಜಗಾಪೂರ, ರಾಯಪ್ಪ ತಾಳಿಕೋಟಿ, ಬೈಲಪ್ಪ ತಳವಾರ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಶಿಲ್ಪಿಗಳಾದ ರವೀಂದ್ರ ಅರ್ಕಾಚಾರ, ಶಿವರಾಜ್ ಕಮ್ಮಾರ, ಮೇಸ್ತ್ರಿ ಸತ್ಯಪ್ಪ ಗೌಡನಭಾವಿ, ಗ್ರಾನೈಟ್ ಟೈಲ್ಸ್ ಮೇಸ್ತ್ರಿಗಳಾದ ಪರಪ್ಪ ಶಿದ್ನೇಕೊಪ್ಪ, ಶಿವು ಹಿರೇಮನಿ ಇವರನ್ನು ಸನ್ಮಾನಿಸಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

### 13 ಗ್ರಾ.ಪಂಗಳಲ್ಲಿ ಶಿಶುಪಾಲನಾ ಕೇಂದ್ರಗಳ ಆರಂಭ । 3 ವರ್ಷದೊಳಗಿನ ಮಕ್ಕಳಿಗೆ ಅವಕಾಶ

# ದುಡಿಯುವ ಕೈಗಳಿಗೆ 'ಕೂಸಿನ ಮನೆ' ಆಸರೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗ್ರಾಮೀಣ ಮಹಿಳೆಯರ ಮಕ್ಕಳ ಪಾಲನೆ ಮತ್ತು ಪೋಷಣೆಗಾಗಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ 'ಕೂಸಿನ ಮನೆ' ಶಿಶುಪಾಲನಾ ಕೇಂದ್ರ ಆರಂಭಕ್ಕೆ ಸರಕಾರ ಮುಂದಡಿ ಇಟ್ಟಿದ್ದು, ಮೊದಲ ಹಂತದಲ್ಲಿ ಲಕ್ಷ್ಮೇಶ್ವರ ತಾಲೂಕಿನಲ್ಲಿ 13 ಕೇಂದ್ರಗಳನ್ನು ತೆರೆಯಲು ಸಿದ್ಧತೆ ನಡೆಸಿದೆ.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಕೂಸಿನ ಮನೆ ಶಿಶುಪಾಲನಾ ಕೇಂದ್ರಗಳನ್ನು ಆರಂಭಿಸುವ ಕಾರ್ಯ ನಡೆಯುತ್ತಿದೆ. ಗ್ರಾಮೀಣ ಭಾಗದಲ್ಲಿ ಉದ್ಯೋಗ ಖಾತ್ರಿ ಯೋಜನೆಯಡಿ ಹೆಚ್ಚಿನ ಮಹಿಳೆಯರು ಕೆಲಸ ಮಾಡಲು ಬೇರೆ ಬೇರೆ ಸ್ಥಳಗಳಿಗೆ ತೆರಳಿದರೆ 3 ವರ್ಷದೊಳಗಿನ ಮಕ್ಕಳನ್ನು ನೋಡಿಕೊಳ್ಳಲು ಯಾರೂ ಇರುವುದಿಲ್ಲ. ಇದರಿಂದ ಮಹಿಳೆಯರು ಕೆಲಸಕ್ಕೆ ಹೋಗಲು ಹಿಂದೇಟು ಹಾಕುತ್ತಿದ್ದರು. ಇನ್ನೂ ಕೆಲವರು ಮಕ್ಕಳನ್ನು ಕರೆದುಕೊಂಡು ಕಾಮಗಾರಿ ಸ್ಥಳಕ್ಕೆ ಹೋಗುತ್ತಿದ್ದರು. ಇದನ್ನು ತಡೆಯುವುದು ಹಾಗೂ ಮಹಿಳೆಯರ ಉದ್ಯೋಗಕ್ಕೆ ಒತ್ತು



ನೀಡಲು ಈ ಶಿಶುಪಾಲನಾ ಕೇಂದ್ರ (ಕೂಸಿನ ಮನೆ)ಗಳನ್ನು ತೆರೆಯಲು ಇಲಾಖೆ ಮುಂದಾಗಿದೆ.

ಶಿಶುಪಾಲನಾ ಕೇಂದ್ರಗಳು ಆರಂಭವಾದರೆ ಮಕ್ಕಳನ್ನು ನೋಡಿಕೊಳ್ಳಲು ನರೇಗಾ ಮಹಿಳಾ ಕೂಲಿ ಕಾರ್ಮಿಕರನ್ನೇ 'ಕೇರ್ ಟೇಕರ್ಸ್' ಎಂದು ಗುರುತಿಸಿ ಅವರಿಗೆ ತರಬೇತಿ ನೀಡಲಾಗಿದೆ. ಉದ್ಯೋಗ ಖಾತ್ರಿಯಡಿ ಇರುವಷ್ಟೇ ವೇತನವನ್ನು ಕೇರ್ ಟೇಕರ್ಸ್‌ಗಳಿಗೆ ಪಾವತಿಸಲಾಗುತ್ತದೆ.

ಶಿಶುಪಾಲನಾ ಕೇಂದ್ರಗಳು ಮೊದಲು ಸುಸಜ್ಜಿತ ಕಟ್ಟಡ, ನೀರು, ಗಾಳಿ, ಬೆಳಕು, ಶೌಚಾಲಯ ವ್ಯವಸ್ಥೆ ಹೊಂದಿರಲಿದೆ. ಇದರೊಂದಿಗೆ ಮಕ್ಕಳಿಗೆ ಆಟದ ಸಾಮಗ್ರಿಗಳು, ಕಲಿಕಾ ಸಾಮಗ್ರಿಗಳನ್ನು

> ಗ್ರಾ.ಪಂ ಮಟ್ಟದಲ್ಲಿ ಕೂಲಿಕಾರರ ಮಕ್ಕಳ ಪಾಲನೆಗಾಗಿ ಕೂಸಿನ ಮನೆ ಹೆಸರಿನಲ್ಲಿ ಶಿಶುಪಾಲನಾ ಕೇಂದ್ರಗಳನ್ನು ಆರಂಭಿಸುತ್ತಿದ್ದೇವೆ. ಈಗಾಗಲೇ ತಾಲೂಕಿನ 13 ಗ್ರಾ.ಪಂಗಳಲ್ಲಿ ಕೇಂದ್ರ ಆರಂಭವಾಗಿವೆ. ಪ್ರತಿ ಪಂಚಾಯಿತಿಗೆ 8 ಜನ ಆರೈಕೆದಾರರ (ಕೇರ್‌ಟೇಕರ್ಸ್) ತರಬೇತಿ ನೀಡಲಾಗಿದೆ.
>
> **– ಕೃಷ್ಣಪ್ಪ ಧರ್ಮರ.**
> ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ.

ಕೇಂದ್ರ ಒಳಗೊಂಡಿರಲಿದೆ. ಮಕ್ಕಳಿಗೆ ಉತ್ತಮ ವಾತಾವರಣವನ್ನು ಒದಗಿಸಲು ಕೇಂದ್ರದ ಗೋಡೆಗಳನ್ನು ಪ್ರಾಣಿ, ಪಕ್ಷಿಗಳ ಚಿತ್ರಗಳಿಂದ ಆಕರ್ಷಣೆ ಹೆಚ್ಚಿಸಲಾಗಿದೆ. ಕನ್ನಡ, ಇಂಗ್ಲೀಷ್ ವರ್ಣಮಾಲೆಗಳು, ಅಂಕಿ ಸಂಖ್ಯೆಗಳನ್ನು ಬರೆಯಿಸಲಾಗಿದೆ. ಪ್ರತಿ ಮಗುವಿಗೂ ಮಧ್ಯಾಹ್ನ ಪೌಷ್ಟಿಕಾಂಶಯುಕ್ತ ಲಘು ಉಪಾಹಾರದ ವ್ಯವಸ್ಥೆ ಮಾಡಲಾಗುತ್ತದೆ. ಈಗಾಗಲೇ ಪಂಚಾಯಿತಿ ವ್ಯಾಪ್ತಿಯಲ್ಲಿಯ ಗ್ರಾಮಗಳಲ್ಲಿನ 150ಕ್ಕೂ ಹೆಚ್ಚು ಮಕ್ಕಳನ್ನು ಗುರುತಿಸಲಾಗಿದೆ.

# ಸಸಿ ನೆಟ್ಟು ಹೆಣ್ಣು ಮಕ್ಕಳ ದಿನ ಆಚರಣೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮೀದಪ ದೊಡ್ಡೂರ ಗ್ರಾ.ಪಂ ವ್ಯಾಪ್ತಿಯ ಉಳ್ಳಟ್ಟಿ ಗ್ರಾಮದಲ್ಲಿ ಮಗಳನ್ನು ಉಳಿಸಿ–ಮಗಳನ್ನು ಓದಿಸಿ (ಬೇಟಿ ಬಚಾವೋ ಬೇಟಿ ಪಡಾವೋ) ಯೋಜನೆಯಡಿ ಬುಧವಾರ ಉಳ್ಳಟ್ಟಿ ಗ್ರಾಮದ ಸ.ಕಿ.ಪ್ರಾ ಶಾಲಾ ಮೈದಾನದಲ್ಲಿ 'ರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆ'ಯನ್ನ ಆಚರಿಸಲಾಯಿತು.

ಗ್ರಾಮದಲ್ಲಿ ಗ್ರಾಮಸಭೆ ಆಯೋಜಿಸಿ ಲಿಂಗಾನುಪಾತ ಹಾಗೂ ಲಿಂಗ ತಾರತಮ್ಯ ಹೋಗಲಾಡಿಸಲು ಹೆಣ್ಣು ಮಕ್ಕಳಿಗೆ ಹೆಚ್ಚು ಶಿಕ್ಷಣ ಕೊಡಿಸಿ ಈ ಮೂಲಕ ಹೆಣ್ಣು ಮಕ್ಕಳನ್ನು ರಕ್ಷಿಸಿ ಎಂದು ಗ್ರಾಮಸ್ಥರಿಗೆ ಅರಿವು ಮೂಡಿಸಲಾಯಿತು. ಗ್ರಾ.ಪಂ ಅಧ್ಯಕ್ಷ ಎಮ್.ವಾಯ್. ತೋಟದ, ಸರ್ವ ಸದಸ್ಯರು, ಗ್ರಾ.ಪಂ ಪಿಡಿಓ ಎಮ್.ಎನ್. ಮಲ್ಲೂರ ಮುಂತಾದವರು ಹೆಣ್ಣು ಮಗುವಿನ ಹೆಸರಲ್ಲಿ ಒಂದು ಸಸಿ ನೆಟ್ಟು ರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಿದರು.

### ವಿ.ಪ ಸದಸ್ಯ ಎಸ್.ವಿ. ಸಂಕನೂರರಿಂದ ಪತ್ರಿಕಾಗೋಷ್ಠಿ । ರಾಜ್ಯ ಸರಕಾರಕ್ಕೆ ಸವಾಲು

# ಎನ್‌ಇಪಿ ವಿರೋಧಕ್ಕೆ ಕಾರಣ ತಿಳಿಸಲಿ

■ವಿಜಯಸಾಕ್ಷಿ ಸುದ್ದಿ, ಗದಗ

ದೇಶದಲ್ಲಿ ಏಕರೂಪ ಶಿಕ್ಷಣ ಇರಬೇಕು ಎನ್ನುವ ಉದ್ದೇಶದಿಂದ ದಿ. ರಾಜೀವ ಗಾಂಧಿಯವರು ರಾಷ್ಟ್ರೀಯ ಶಿಕ್ಷಣ ನೀತಿ ಜಾರಿಗೆ ತಂದರು. ದೇಶದ ಎಲ್ಲ ರಾಜ್ಯಗಳು ಶಿಕ್ಷಣ ನೀತಿಯನ್ನು ಅಳವಡಿಸಿಕೊಂಡವು. ಸದ್ಯ ನರೇಂದ್ರ ಮೋದಿ ಹೊಸ ಶಿಕ್ಷಣ ನೀತಿ ಜಾರಿಗೊಳಿಸಲು ಮುಂದಾದರೆ, ರಾಜ್ಯ ಸರಕಾರ ಅದಕ್ಕೆ ವಿರೋಧ ವ್ಯಕ್ತಪಡಿಸುತ್ತಿದೆ. ಈ ವಿರೋಧಕ್ಕೆ ಸ್ಪಷ್ಟ ಕಾರಣಗಳನ್ನು ರಾಜ್ಯ ಸರ್ಕಾರವೇ ತಿಳಿಸಬೇಕು ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆಗ್ರಹಿಸಿದರು.



ಕೇಂದ್ರ ಸರಕಾರ ಜಾರಿಗೊಳಿಸಿರುವ ಹೊಸ ರಾಷ್ಟ್ರೀಯ ಶಿಕ್ಷಣ ನೀತಿ ಒಕ್ಕೂಟ ವ್ಯವಸ್ಥೆಗೆ ಮಾರಕವಾಗಿದೆ. ಸಂವಿಧಾನ ಮತ್ತು ಪ್ರಜಾಪ್ರಭುತ್ವಕ್ಕೆ ವಿರುದ್ಧವಾಗಿದೆ ಎಂದು ಸಿದ್ದರಾಮಯ್ಯ ಆರೋಪಿಸುತ್ತಾರೆ. ಹಾಗಿದ್ದರೆ ರಾಜೀವ ಗಾಂಧಿಯವರು ಜಾರಿಗೆ ತಂದ ಏಕರೂಪ ಶಿಕ್ಷಣ ವ್ಯವಸ್ಥೆಯೂ ಒಕ್ಕೂಟ ವ್ಯವಸ್ಥೆಗೆ ಮಾರಕವಾಗಿದೆ ಎಂಬುದನ್ನು ಬಹಿರಂಗವಾಗಿ ಒಪ್ಪಿಕೊಳ್ಳಲಿ ಎಂದು ಸವಾಲು ಹಾಕಿದ ಅವರು, ಕೇವಲ ಪ್ರಧಾನಿ ನರೇಂದ್ರ ಮೋದಿ ಇದನ್ನು ಜಾರಿಗೊಳಿಸಲು ಮುಂದಾಗಿದ್ದಾರೆ ಎಂಬ ಒಂದೇ ಕಾರಣಕ್ಕೆ ರಾಜಕೀಯ ದುರುದ್ದೇಶದಿಂದ ವಿರೋಧ ಮಾಡುವುದು ಸರಿಯಲ್ಲ ಎಂದರು.

ರಾಜ್ಯ ಶಿಕ್ಷಣ ನೀತಿಗಾಗಿ ಕಾಂಗ್ರೆಸ್ ಸರ್ಕಾರ ಸಮಿತಿ ರಚಿಸಿದ್ದು, ಅದರ ಮುಖ್ಯಸ್ಥ ಸುಖದೇವ್ ಥೋರತ್ ಮಹಾರಾಷ್ಟ್ರದವರು. ನಮ್ಮ ರಾಜ್ಯದ ಸಂಸ್ಕೃತಿ, ಪರಂಪರೆ, ಇತಿಹಾದ, ದೇಸಿತನಕ್ಕೆ ಸರಿಹೊಂದುವಂತಹ ಶಿಕ್ಷಣ ನೀತಿಯನ್ನು ಅವರಿಂದ ನಿರೀಕ್ಷಿಸಲು ಸಾಧ್ಯವೇ? ನಮ್ಮ ರಾಜ್ಯದಲ್ಲಿ ಯಾರೂ ಶಿಕ್ಷಣ ತಜ್ಞರು ಇರಲಿಲ್ಲವೇ? ಸಮಿತಿಗೆ ಹೊರ ರಾಜ್ಯದವರನ್ನು ಅಧ್ಯಕ್ಷರನ್ನಾಗಿ ಮಾಡುವ ಮೂಲಕ ನಮ್ಮವರಿಗೆ ಅವಮಾನ ಮಾಡಲಾಗಿದೆ ಎಂದು ಕಿಡಿಕಾರಿದರು.ಸುದ್ದಿಗೋಷ್ಠಿಯಲ್ಲಿ ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರಾದ ಜಯದೇವ ಮೆಣಸಗಿ, ಶಶಿಧರ ದಿಂಡೂರ, ಸಂತೋಷ್ ಅಕ್ಕಿ, ಮಹಾಂತೇಶ, ಮಲ್ಲಿಕಾರ್ಜುನ, ಪುನೀತ್ ಬೆನಕನವಾರಿ ಇದ್ದರು.

> ಎಸ್‌ಇಪಿ ಸಮಿತಿಯ ಕಾರ್ಯವೈಖರಿ ಬಗ್ಗೆ ಜನರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಸಮಿತಿಯು ಕೆಲವೇ ಮಂದಿ ಆಯ್ದ ಪ್ರಾಧ್ಯಾಪಕರು, ಶಿಕ್ಷಣ ತಜ್ಞರು, ಆಡಳಿತ ಮಂಡಳಿಯವರಿಂದ ಅಭಿಪ್ರಾಯ ಸಂಗ್ರಹಿಸುತ್ತಿದೆ. ಇದು ಪ್ರಜಾಪ್ರಭುತ್ವಕ್ಕೆ ವಿರೋಧವಾಗಿದೆ. ಈ ಬಗ್ಗೆ ರಾಜ್ಯಾದ್ಯಂತ ಸಹಿ ಸಂಗ್ರಹ ಅಭಿಯಾನ ನಡೆಸಲಾಗುತ್ತಿದ್ದು, ಈವರೆಗೆ 10.16 ಲಕ್ಷ ಜನ ಎನ್‌ಇಪಿ ಪರ ಸಹಿ ದಾಖಲಿಸಿದ್ದಾರೆ ಎಂದು ಎಸ್.ವಿ. ಸಂಕನೂರ ತಿಳಿಸಿದರು.

## ಬಲಿಷ್ಠ ಭಾರತ ನಿರ್ಮಾಣಕ್ಕೆ ಮುಂದಾಗಿ

▶▶ಮೊದಲನೇ ಪುಟದಿಂದ

ಪ್ರಥಮ ಮತ್ತು ಪ್ರಧಾನವೆಂದು ಭಾವಿಸಿ ಈಗಾಗಲೇ ಮತದಾನ ಚೀಟಿಯನ್ನು ಹೊಂದಿರುವವರು ಮತದಾನ ಮಾಡಿದಾಗ ಈ ಕಾರ್ಯಕ್ರಮ ಸಾರ್ಥಕವಾಗುತ್ತದೆ ಎಂದು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಾನೂನು ಸಲಹೆಗಾರರಾದ ಎಸ್.ಜಿ. ಪಲ್ಲೇದ ಮಾತನಾಡಿ, ಯುವಜನತೆ ತಮ್ಮ ಜ್ಞಾನ ಭಂಢಾರ, ಅನುಭವ, ರಾಷ್ಟ್ರಾಭಿಮಾನವನ್ನು ಬೆಳೆಸಿಕೊಂಡು ಮತದಾನ ಮಾಡುವುದರ ಮೂಲಕ ದೇಶವನ್ನು ಸುಭದ್ರಗೊಳಿಸಬೇಕು. ಮತದಾನದ ಸಂದರ್ಭದಲ್ಲಿ ಯಾವ ಅಭ್ಯರ್ಥಿಯೂ ಸೂಕ್ತವೆನಿಸದಿದ್ದಲ್ಲಿ ನೋಟಾ ಒತ್ತುವುದರ ಮೂಲಕ ಮತಚಲಾಯಿಸಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲೆಯಲ್ಲಿ ಉತ್ತಮ ಚುನಾವಣಾ ಕಾರ್ಯ ನಿರ್ವಹಿಸಿದ ಬಿಎಲ್‌ಒಗಳಿಗೆ, ಉಪ ವಿಭಾಗಧಿಕಾರಿ ವೆಂಕಟೇಶ ನಾಯ್ಕ, ಗ್ರೇಡ್–2 ತಹಸೀಲ್ದಾರಾದ ಜಯಲಕ್ಷ್ಮಿ ವಸ್ತ್ರದ, ಪ್ರಥಮ ದರ್ಜೆ ಸಹಾಯಕ ಶಿವಾನಂದ ಮೊಗಲಿ, ಡಾಟಾ ಎಂಟ್ರಿ ಆಪರೇಟರ್ ಶಿವಾಜ ಪೇಠೆ ಅವರನ್ನು ಸನ್ಮಾನಿಸಲಾಯಿತು.

ರಾಷ್ಟ್ರೀಯ ಮತದಾರರ ದಿನಾಚರಣೆ ಅಂಗವಾಗಿ ಸ್ವೀಪ್ ಸಮಿತಿ ಏರ್ಪಡಿಸಿದ ಪ್ರಬಂಧ, ಭಿತ್ತಿಚಿತ್ರ, ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನವನ್ನು ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ವಿವಿಧ ಇಲಾಖೆಯ ಅಧಿಕಾರಿಗಳು, ಶಾಲಾ ವಿದ್ಯಾರ್ಥಿಗಳು ಹಾಜರಿದ್ದರು.

ಉಪವಿಭಾಗಧಿಕಾರಿ ಡಾ. ವೆಂಕಟೇಶ ನಾಯ್ಕ್ ಸ್ವಾಗತಿಸಿದರು. ಶಿವಾನಂದ ಗಿಡ್ನಂದಿ ಕಾರ್ಯಕ್ರಮ ನಿರೂಪಿಸಿದರು. ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಂ.ಎ. ರೆಡ್ಡೇರ ವಂದಿಸಿದರು.

### ಜ.30ರಿಂದ ಫೆಬ್ರುವರಿ 13ರವರೆಗೆ ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನ

# ಕುಷ್ಠರೋಗದ ಕುರಿತು ಭಯ ಬೇಡ

■ವಿಜಯಸಾಕ್ಷಿ ಸುದ್ದಿ, ಗದಗ

ಜನೆವರಿ 30ರಿಂದ ಫೆಬ್ರುವರಿ 13ರವರೆಗೆ ಜಿಲ್ಲಾದ್ಯಂತ ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನವನ್ನು ವ್ಯವಸ್ಥಿತವಾಗಿ ಜರುಗಿಸಬೇಕೆಂದು ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ. ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯದಿಂದ ಗುರುವಾರ ಏರ್ಪಡಿಸಲಾಗಿದ್ದ ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನ ಪಾಕ್ಷಿಕ ಆಚರಣೆಯ ಜಿಲ್ಲಾ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನದ ಅಂಗವಾಗಿ ಈ ವರ್ಷ 'ಕಳಂಕವನ್ನು ಕೊನೆಗೊಳಿಸಿ ಘನತೆಯನ್ನು ಎತ್ತಿ ಹಿಡಿಯಿರಿ' ಎಂಬುದು ಘೋಷವಾಕ್ಯವಾಗಿದೆ. ಅದರಂತೆ ಅಧಿಕಾರಿಗಳೆಲ್ಲರೂ ಕಾರ್ಯನಿರ್ವಹಿಸೋಣ.



ತಾಲೂಕು ಮಟ್ಟದಲ್ಲಿಯೂ ಸಹ ತಹಸೀಲ್ದಾರರ ಅಧ್ಯಕ್ಷತೆಯಲ್ಲಿ ಸಮನ್ವಯ ಸಮಿತಿ ಸಭೆ ಜರುಗಿಸಬೇಕು. ಒಟ್ಟಾರೆಯಾಗಿ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಅಭಿಯಾನವನ್ನು ಯಶಸ್ವಿಗೊಳಿಸಬೇಕೆಂದರು.

ಜಿಲ್ಲಾ ಕುಷ್ಠರೋಗ ನಿರ್ಮೂಲನಾ ಅಧಿಕಾರಿ ಡಾ. ರಾಜೇಂದ್ರ ಬಸರಿಗಿಡದ ಮಾತನಾಡಿ, ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನವನ್ನು ಜನೆವರಿ 30ರಿಂದ ಫೆಬ್ರುವರಿ 13ರವರೆಗೆ ಹಮ್ಮಿಕೊಳ್ಳಲಾಗಿದ್ದು, ಸದರಿ ಅವಧಿಯಲ್ಲಿ ಎಲ್ಲ ಗ್ರಾಮದ ಜನರಿಗೆ ಆರೋಗ್ಯ ಶಿಕ್ಷಣ ನೀಡಲಾಗುವುದು. ಶಾಲಾ ಮಕ್ಕಳಿಂದ ಜಾಗೃತಿ ಜಾಥಾ ಕಾರ್ಯಕ್ರಮವನ್ನೂ ಸಹ ಹಮ್ಮಿಕೊಳ್ಳಲಾಗುವುದು. ಕುಷ್ಠ ರೋಗ ಸಂಪೂರ್ಣ ಗುಣಮುಖ ಹೊಂದುವ ಕಾಯಿಲೆಯಾಗಿದ್ದು, ಕುಷ್ಠರೋಗವನ್ನು ಶೀಘ್ರ ಪತ್ತೆ ಹಚ್ಚಿ ನಿಗದಿತ ಸಂಪೂರ್ಣ ಚಿಕಿತ್ಸೆಯನ್ನು ಪಡೆದು ನಿಯಮಿತ ವ್ಯಾಯಾಮ ಮಾಡಿದಲ್ಲಿ ಕುಷ್ಠರೋಗದಿಂದ ಸಂಪೂರ್ಣ ಗುಣಮುಖರಾಗಬಹುದು. ಎಲ್ಲ ಸರ್ಕಾರಿ ಆಸ್ಪತ್ರೆಗಳಲ್ಲಿ ಬಹುವಿಧ ಔಷಧಿ ಚಿಕಿತ್ಸೆ ಉಚಿತವಾಗಿ ಲಭ್ಯವಿದೆ ಎಂದು ಸಭೆಯಲ್ಲಿ ತಿಳಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕುಷ್ಠರೋಗ ವಿಭಾಗದ ಭಿತ್ತಿಪತ್ರವನ್ನು ಬಿಡುಗಡೆ ಮಾಡಲಾಯಿತು. ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಬಿ.ಸಿ. ಕರಿಗೌಡ್ರ, ಜಿಲ್ಲಾ ಆರ್.ಸಿ.ಎಚ್. ಅಧಿಕಾರಿ ಡಾ. ಮೀನಾಕ್ಷಿ, ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ವೆಂಕಟೇಶ ರಾಠೋಡ, ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ. ಅರುಂಧತಿ ಕೆ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ರೂಪಸೇನ ಚವ್ಹಾಣ, ತಾಲೂಕು ಆರೋಗ್ಯಾಧಿಕಾರಿಗಳು, ಸಮಿತಿ ಸದಸ್ಯರು ಹಾಜರಿದ್ದರು.

> ಕುಷ್ಠರೋಗದ ಕುರಿತು ಜನಸಾಮಾನ್ಯರಲ್ಲಿ ಭಯ ಬೇಡ. ಕುಷ್ಠರೋಗಕ್ಕೆ ಸರ್ಕಾರಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಲಭ್ಯವಿದ್ದು, ಸಂಪೂರ್ಣ ಉಚಿತವಾಗಿದೆ. ವ್ಯಕ್ತಿಯ ದೇಹದ ಮೇಲೆ ಯಾವುದೇ ಭಾಗದಲ್ಲಿ ತಿಳಿ ಬಿಳಿ ಅಥವಾ ತಾಮ್ರವರ್ಣದ ಸ್ಪರ್ಶ ಜ್ಞಾನವಿಲ್ಲದ ಮಚ್ಚೆಗಳು ಕಂಡುಬಂದಲ್ಲಿ ಸಮೀಪದ ಸರ್ಕಾರಿ ಆಸ್ಪತ್ರೆಗೆ ತೆರಳಿ ಪರೀಕ್ಷಿಸಿಕೊಳ್ಳಿ. ಕುಷ್ಠರೋಗಕ್ಕೆ ಅಂಟಿಕೊಂಡಿರುವ ಕಳಂಕ ಹಾಗೂ ತಾರತಮ್ಯವನ್ನು ಹೋಗಲಾಡಿಸಿ ಕುಷ್ಠರೋಗಿಗಳಿಗೆ ಸಮಾಜದ ಮುಖ್ಯವಾಹಿನಿಯಲ್ಲಿ ಗೌರವಯುತವಾಗಿ ಬದುಕಲು ಅವಕಾಶ ನೀಡೋಣ. ಈ ಕುರಿತು ಜನಸಾಮಾನ್ಯರಲ್ಲಿ ಜಾಗೃತಿ ಅಭಿಯಾನ ಹಮ್ಮಿಕೊಂಡು ಯಶಸ್ವಿಗೊಳಿಸೋಣ ಎಂದು ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ. ಹೇಳಿದರು.


**ಪುರಸಭೆ ಕಾರ್ಯಾಲಯ, ನರಗುಂದ ಜಿ. ಗದಗ, ಕರ್ನಾಟಕ–582207**
**ದೂರವಾಣಿ/ಫ್ಯಾಕ್ಸ್ : 08377–244227 / 244226**
**Email : itstaff_ulb_naragund@yahoo.co.in**
ಕ್ರಸಂ:ಪುಸನ/15ನೇ ಹಣಕಾಸು&ಎ.ಪ/ಟೆಂಡರ/2023–24 ದಿನಾಂಕ:24–01–2024

**ಅಲ್ಪಾವಧಿ ಟೆಂಡರ್ ಪ್ರಕಟಣೆ**

ನರಗುಂದ ಪುರಸಭೆಯ ಸನ್ 2023–24 ನೇ ಸಾಲಿನಲ್ಲಿ ವಿವಿಧ ಅಭಿವೃದ್ಧಿ ಯೋಜನೆಯ ಅನುದಾನಗಳಡಿ ಈ ಕೆಳಕಾಣಿಸಿದ ಕಾಮಗಾರಿಗಳ ನಿರ್ವಹಣೆಗಾಗಿ ನಿಗದಿತ ದಸ್ತಾವೇಜ್‌ಗಳಲ್ಲಿ ಅರ್ಹ ಗುತ್ತಿಗೆದಾರರ ಮೂಲಕ ಅಲ್ಪಾವಧಿ ಟೆಂಡರ್‌ನ್ನು ಆಹ್ವಾನಿಸಲಾಗಿದೆ. ದಿನಾಂಕ : **07–02–2024** ರ ಸಂಜೆ 4:00 ಗಂಟೆಯ ಒಳಗಾಗಿ ಕಚೇರಿಯಲ್ಲಿ ಟೆಂಡರ್ ಫಾರಂ ಫೀ ಭರಣಾ ಮಾಡಿ ಟೆಂಡರ್ ಬುಕ್‌ಲೆಟ್ ಪಡೆದುಕೊಂಡು ದಿನಾಂಕ : **09–02–2024** ಸಂಜೆ 04:00 ಗಂಟೆಯ ಒಳಗಾಗಿ ಟೆಂಡರ ಕಚೇರಿಯಲ್ಲಿನ ಟೆಂಡರ್ ಪೆಟ್ಟಿಗೆಯಲ್ಲಿ ಹಾಕುವುದು. ಟೆಂಡರ್ ಷರತ್ತುಗಳು ಹಾಗೂ ಹೆಚ್ಚಿನ ಮಾಹಿತಿಗಾಗಿ **www.naragundatown.mrc.gov.in** ಸಂಪರ್ಕಿಸುವುದು. ಹಾಗೂ ಟೆಂಡರ ಮಂಜೂರು ವ ನಾಮಂಜೂರ ಮಾಡುವ ಅಧಿಕಾರವನ್ನು ಪುರಸಭೆಯು ಕಾಯ್ದಿರಿಸಿಕೊಂಡಿದೆ.

| ಕ್ರ.ಸಂ | ಕಾಮಗಾರಿ ಹೆಸರು | ಅಂದಾಜು ಮೊತ್ತ ರೂ. ಲಕ್ಷಗಳಲ್ಲಿ |
|---|---|---|
| 1 | ನರಗುಂದ ಪುರಸಭೆ ವ್ಯಾಪ್ತಿಯಲ್ಲಿ ಹಿರೇಹಳ್ಳದ ಹತ್ತಿರ ಬೂದು ನೀರು ನಿರ್ವಹಣೆ (Gray Water Management) ಅಳವಡಿಸುವುದು. | 3.00 |
| 2 | ತರಕಾರಿ ಮಾರುಕಟ್ಟೆಯಲ್ಲಿನ ಪುರಸಭೆ ನಿಧಿ ಮತ್ತು 10 ನೇ ಹಣಕಾಸು ಯೋಜನೆಯಲ್ಲಿ ನಿರ್ಮಿಸಿದ ಎಡಭಾಗದಲ್ಲಿನ ಮಳಿಗೆಗಳ ಮೇಲ್ಛಾವಣಿ ನಿರ್ಮಾಣ ಮತ್ತು ದುರಸ್ಥಿ ಕಾರ್ಯ ಮಾಡುವುದು. | 4.50 |
| 3 | ತರಕಾರಿ ಮಾರುಕಟ್ಟೆಯಲ್ಲಿನ ಪುರಸಭೆ ನಿಧಿ ಮತ್ತು 10 ನೇ ಹಣಕಾಸು ಯೋಜನೆಯಲ್ಲಿ ನಿರ್ಮಿಸಿದ ಬಲಭಾಗದಲ್ಲಿನ ಮಳಿಗೆಗಳ ದುರಸ್ಥಿ ಕಾರ್ಯ ಮಾಡುವುದು. | 4.00 |
| 4 | ತರಕಾರಿ ಮಾರುಕಟ್ಟೆಯಲ್ಲಿನ ಪುರಸಭೆ ನಿಧಿ ಮತ್ತು 10 ನೇ ಹಣಕಾಸು ಯೋಜನೆಯಲ್ಲಿ ನಿರ್ಮಿಸಿದ ಮಳಿಗೆಗಳಿಗೆ ಪೇಂಟಿಂಗ್ ಮಾಡಿಸುವುದು. | 2.00 |

**ಸಹಿ/– ಮುಖ್ಯಾಧಿಕಾರಿ, ಪುರಸಭೆ, ನರಗುಂದ**
**ಸಹಿ/– ಆಡಳಿತಾಧಿಕಾರಿಗಳು, ಪುರಸಭೆ, ನರಗುಂದ**
ವಾಸಾಸಂಇ/ಗದಗ/ಕೆಎಸ್‌ಎಂಸಿಎ/486/2023–24


### ತಾಯಿಯಿಂದ ಮಗುವಿಗೆ ಹೆಚ್.ಐ.ವಿ. ಸೋಂಕು ನಿರ್ಮೂಲನೆಗಾಗಿ ಆಂದೋಲನ

# ಹೆಚ್.ಐ.ವಿ ನಿಯಂತ್ರಣದಲ್ಲಿ ಉತ್ತಮ ಪ್ರಗತಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಘಟಕ ಹಾಗೂ ಮಹಿಳಾ ಮತ್ತು ಮಕ್ಕಳ ಆಸ್ಪತ್ರೆಯ (ಪಿಪಿಟಿಸಿಟಿ ಕೇಂದ್ರ) ಗದಗ ಇವರುಗಳ ಸಂಯುಕ್ತ ಆಶ್ರಯದಲ್ಲಿ ಹಳೆ ಜಿಲ್ಲಾಸ್ಪತ್ರೆಯ ಡ್ಯಾಪ್ಕ್ಯೂ ಕಛೇರಿ ಸಭಾಭವನದಲ್ಲಿ ಬುಧವಾರ ತಾಯಿಯಿಂದ ಮಗುವಿಗೆ ಹೆಚ್.ಐ.ವಿ. ಸೋಂಕು ನಿರ್ಮೂಲನೆಗಾಗಿ ಆಂದೋಲನ ಕಾರ್ಯಕ್ರಮ ಹಾಗೂ ಗರ್ಭಿಣಿ ಮಹಿಳೆಯರಿಗೆ ಸಾಮೂಹಿಕ ಸೀಮಂತ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಡಾ.ಅರುಂಧತಿ ಕುಲಕರ್ಣಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಪ್ರತಿಯೊಬ್ಬ ಗರ್ಭಿಣಿ ಮಹಿಳೆಯು ಆರೋಗ್ಯಯುತ ಜೀವನ ನಡೆಸಲು ಪೌಷ್ಟಿಕಾಂಶಯುಕ್ತ ಆಹಾರ ಸೇವನೆ ಮಾಡಬೇಕು. ಹೆಚ್.ಐ.ವಿ. ಮುಕ್ತ ಮಗುವನ್ನು ಪಡೆಯಲು ಹೆಚ್.ಐ.ವಿ. ಕಾಯಿಲೆಯ ಮಾಹಿತಿ ಪಡೆದು ಎಲ್ಲ



ಗರ್ಭಿಣಿ ಮಹಿಳೆಯರು ತಪಾಸಣೆ ಮಾಡಿಸಿಕೊಳ್ಳಲು ಸಲಹೆ ನೀಡಿದರು. ಪ್ರತಿಯೊಬ್ಬ ಗರ್ಭಿಣಿಯು ಪ್ರತಿ ತ್ರೈಮಾಸಿಕದಲ್ಲಿ ಸಮಯಕ್ಕೆ ಸರಿಯಾಗಿ ತಪಾಸಣೆ ಮಾಡಿಸಿಕೊಂಡು ವೈದ್ಯರ ಸಲಹೆ–ಸೂಚನೆಗಳನ್ನು ಪಾಲಿಸಲು ತಿಳಿಸಿದರು.

ಪ್ರತಿದಿನ ಯೋಗ, ವ್ಯಾಯಾಮ ಮಾಡುತ್ತ ಚಟುವಟಿಕೆಯಿಂದ ಇರಬೇಕು. ಹೆಚ್.ಐ.ವಿ ಏಡ್ಸ್ ಕಾಯ್ದೆ ಜಾರಿಯಾಗಿದ್ದು, ಹೆಚ್.ಐ.ವಿ.ಯೊಂದಿಗೆ ಬದುಕುತ್ತಿರುವ ವ್ಯಕ್ತಿಗಳಿಗೆ ಸಾರ್ವಜನಿಕ ಕ್ಷೇತ್ರ ಹಾಗೂ ಖಾಸಗಿ ಕ್ಷೇತ್ರದಲ್ಲಿ ಹೆಚ್.ಐ.ವಿ ಸಂಬಂಧಿತ ತಾರತಮ್ಯದ ವಿರುದ್ಧ ಕಾನೂನಿನ ರಕ್ಷಣೆ ನೀಡಿದೆ ಎಂದರು.

ಜಿಲ್ಲಾ ಐಸಿಟಿಸಿ ಮೇಲ್ವಿಚಾರಕ ಬಸವರಾಜ ಲಾಳಗಟ್ಟಿ ಮಾತನಾಡಿ, ಹೆಚ್.ಐ.ವಿ ಕಾರ್ಯಕ್ರಮ ಜಿಲ್ಲೆಯಲ್ಲಿ ಉತ್ತಮವಾಗಿ ಕಾರ್ಯಗತಗೊಂಡಿದ್ದು, ಹೆಚ್.ಐ.ವಿ ಸೋಂಕಿತ ಗರ್ಭಿಣಿ ಮಹಿಳೆಯಿಂದ ಹುಟ್ಟಿದ ಮಕ್ಕಳು ಹೆಚ್.ಐ.ವಿ.ಯಿಂದ ಮುಕ್ತವಾಗಿದ್ದು ಉತ್ತಮ ಪ್ರಗತಿಯಾಗಿದೆ. ರಾಜ್ಯದಲ್ಲಿ ನಮ್ಮ ಜಿಲ್ಲೆಯು ಹೆಚ್.ಐ.ವಿ ನಿಯಂತ್ರಣದಲ್ಲಿ ಉತ್ತಮ ಪ್ರಗತಿ ಸಾಧಿಸಿದ್ದು, ಹೆಚ್.ಐವಿ ಸೋಂಕಿನ ಪ್ರಮಾಣ 0.03% ಇದ್ದು, ಹೆಚ್.ಐ.ವಿ. ಸೋಂಕನ್ನು ಸೊನ್ನೆಗೆ ತರಲು ಪ್ರತಿಯೊಬ್ಬರೂ ಕೈ ಜೋಡಿಸಬೇಕೆಂದು ತಿಳಿಸಿದರು.

ಹೆಚ್‌ಐವಿ ಸೋಂಕಿತರಿಗೆ ಸರಕಾರದಿಂದ ದೊರೆಯುವ ಸೌಲಭ್ಯಗಳ ಬಗ್ಗೆ ಹಾಗೂ ಜಿಲ್ಲೆಯಲ್ಲಿ ದೊರೆಯುವ ಸೌಲಭ್ಯಗಳ ಬಗ್ಗೆ ವಿವರಿಸಲಾಯಿತು. ಯೋಜನೆಗಳಾದ ಅನ್ನ ಅಂತ್ಯೋದಯ ಯೋಜನೆ, ವಿಶೇಷ ಪಾಲನಾ ಯೋಜನೆ, ವಸತಿ ಸೌಲಭ್ಯ, ಧನಶ್ರೀ ಯೋಜನೆ, ಚೇತನಾ ಯೋಜನೆ, ಮೈತ್ರಿ ಯೋಜನೆ, ಉಚಿತ ಕಾನೂನು ಸೇವೆ ಹಾಗೂ ಮೂಲಭೂತ ತರಬೇತಿಗಳ ಕುರಿತು ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ಡಾ. ಮಹೇಶ ಕೊಪ್ಪಳ, ಶ್ರೀಮತಿ ಚವಡಿ, ಶ್ರೀಮತಿ ಮುನ್ನಾಳ ಸೇರಿದಂತೆ ಆರೋಗ್ಯ ಇಲಾಖೆಯ ಸಿಬ್ಬಂದಿಗಳು ಹಾಜರಿದ್ದರು.

ಅನುಸೂಯಾ ಟಂಕಸಾಲಿ ಪ್ರಾರ್ಥಿಸಿದರು. ಚನ್ನಮ್ಮ ಸ್ವಾಗತಿಸಿದರು. ರೇಣುಕಾ ವಂದಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka


ನಾಡಿನ ಸಮಸ್ತ ಜನತೆಗೆ
75ನೇ ಗಣರಾಜ್ಯೋತ್ಸವದ ಶುಭಾಶಯಗಳು
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ಶಕ್ತಿ
ಉಚಿತ ಬಸ್ ಪ್ರಯಾಣದ ಶಕ್ತಿ ಯೋಜನೆಯಿಂದ ನಮ್ಮಂಥ ಬಡವರು ಮತ್ತು ಮಧ್ಯಮ ವರ್ಗದ ಮಹಿಳೆಯರು ಮತ್ತು ಯುವತಿಯರಿಗೆ ತುಂಬಾ ಅನುಕೂಲವಾಗಿದೆ. ಓಡಾಟದ ವೆಚ್ಚವನ್ನು ಮನೆ ಖರ್ಚಿಗೆ ಬಳಸಿಕೊಳ್ಳುತ್ತಿದ್ದೇವೆ. ಇದರಿಂದ ನಮಗೆ ನೆಮ್ಮದಿ ತಂದಿದೆ. ಸರ್ಕಾರಕ್ಕೆ ಧನ್ಯವಾದ.
ಕಮಲಾ ಬಾಯಿ
ಫಲಾನುಭವಿ
ಗೃಹ ಜ್ಯೋತಿ
ಶ್ರೀ ಸಿದ್ದರಾಮಯ್ಯ ಅವರ ಸರ್ಕಾರ ಜಾರಿಗೆ ತಂದಿರುವ ಗೃಹಜ್ಯೋತಿ ಯೋಜನೆಯಿಂದ ಶೂನ್ಯ ಕರೆಂಟ್ ಬಿಲ್ ಬರುತ್ತಿದೆ. ಉಳಿತಾಯವಾಗುವ ಹಣದಿಂದ ಮಾತ್ರೆ ಖರೀದಿಸುತ್ತಿದ್ದೇನೆ. ಇದಕ್ಕಾಗಿ ಸರ್ಕಾರಕ್ಕೆ ಧನ್ಯವಾದ.
ಗಂಗಮ್ಮ
ಫಲಾನುಭವಿ
ಅನ್ನಭಾಗ್ಯ
ಸರ್ಕಾರ ಜಾರಿಗೆ ತಂದಿರುವ ಅನ್ನಭಾಗ್ಯ ಯೋಜನೆಯಿಂದ ನಮಗೆ ಬಹಳ ಅನುಕೂಲವಾಗಿದೆ. 5 ಕೆಜಿ ಅಕ್ಕಿ ಸಿಗುತ್ತಿದೆ. ಇನ್ನುಳಿದ 5 ಕೆಜಿ ಅಕ್ಕಿ ಬದಲಿಗೆ 170 ರೂ. ಖಾತೆಗೆ ಜಮೆ ಆಗುತ್ತಿದೆ. ಇದರಿಂದ ಸಣ್ಣಪುಟ್ಟ ಸಾಮಾನು ಖರೀದಿಸಲು ಸಹಾಯವಾಗಿದೆ.
ಮಧು
ಫಲಾನುಭವಿ
ಗೃಹಲಕ್ಷ್ಮಿ
ಗೃಹಲಕ್ಷ್ಮಿ ಯೋಜನೆಯಿಂದ ಪ್ರತಿ ತಿಂಗಳು 2000 ರೂ. ಬರುತ್ತಿದೆ. ಈ ಹಣವನ್ನು ಮನೆ ಖರ್ಚಿಗೆ ಬಳಸಿಕೊಳ್ಳುತ್ತಿದ್ದೇನೆ. ಇದಕ್ಕಾಗಿ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಶ್ರೀ ಡಿ.ಕೆ. ಶಿವಕುಮಾರ್ ಅವರಿಗೆ ಧನ್ಯವಾದ.
ಲೇಪಾಕ್ಷಿ
ಫಲಾನುಭವಿ
ಯುವನಿಧಿ
ಕರ್ನಾಟಕ ಸರ್ಕಾರದ ಯುವನಿಧಿ ಯೋಜನೆಯಿಂದ ನನಗೆ 3000 ರೂ. ಬಂದಿದೆ. ಈ ಹಣವನ್ನು ಸ್ಪರ್ಧಾತ್ಮಕ ಪರೀಕ್ಷೆ ಬರೆಯಲು ಬಳಸಿಕೊಂಡಿದ್ದೇನೆ. ನನ್ನಂತಹ ಅನೇಕ ಯುವಜನರಿಗೆ ಈ ಯೋಜನೆಯಿಂದ ಪ್ರಯೋಜನವಾಗುತ್ತಿದೆ.
ಹೇಮಂತ್
ಫಲಾನುಭವಿ
ಎಲ್ಲರಲ್ಲೂ ಸಮಾನತೆ, ಸರ್ವ ಧರ್ಮ ಸಹಿಷ್ಣುತೆ, ಸೋದರತೆ, ಏಕತೆ ಇವು ಡಾ. ಬಿ.ಆರ್. ಅಂಬೇಡ್ಕರ್ ಅವರ ಸಂವಿಧಾನದ ಪ್ರಮುಖ ಆಶಯಗಳು. ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಮೂಲಭೂತ ಹಕ್ಕು ನಮ್ಮ ಸರ್ಕಾರದ ಧ್ಯೇಯ.
ಶ್ರೀ ಸಿದ್ದರಾಮಯ್ಯ
ಸನ್ಮಾನ್ಯ ಮುಖ್ಯಮಂತ್ರಿಗಳು
ಶ್ರೀ ಡಿ. ಕೆ. ಶಿವಕುಮಾರ್
ಮಾನ್ಯ ಉಪಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ...
ಗ್ಯಾರಂಟಿ ಸರ್ಕಾರ...
ನುಡಿದಂತೆ ನಡೆದಿದ್ದೇವೆ...
ಶಕ್ತಿ ಮಹಿಳೆಯರಿಗೆ ಬಸ್ ಪ್ರಯಾಣ ಉಚಿತ
ಗೃಹ ಜ್ಯೋತಿ ಪ್ರತಿ ಮನೆಗೆ 200 ಯೂನಿಟ್‌ವರೆಗೆ ವಿದ್ಯುತ್ ಉಚಿತ
ಅನ್ನಭಾಗ್ಯ ಬಡವರಿಗೆ ಪ್ರತಿ ತಿಂಗಳು 10 kg 5 ಕೆಜಿ ಆಹಾರಧಾನ್ಯ ಬದಲಿಗೆ ರೂ. 170
ಗೃಹಲಕ್ಷ್ಮಿ ಪ್ರತಿ ಮನೆಯೊಡತಿಗೆ ಪ್ರತಿ ತಿಂಗಳು ₹2000
ಯುವನಿಧಿ ಪ್ರತಿ ತಿಂಗಳು ನಿರುದ್ಯೋಗ ಭತ್ಯೆ ₹3000 ಪದವೀಧರರಿಗೆ ₹1500 ಡಿಪ್ಲೋಮಾ ಪದವೀಧರರಿಗೆ
"ಸಾರ್ವಜನಿಕ ಆಸ್ತಿ ಪಾಸ್ತಿ ರಕ್ಷಿಸುವುದು ಮತ್ತು ಹಿಂಸೆಯನ್ನು ತ್ಯಜಿಸುವುದು ಪ್ರತಿಯೊಬ್ಬ ಭಾರತೀಯನ ಮೂಲಭೂತ ಕರ್ತವ್ಯ"
CMofKarnataka
https://dipr.karnataka.gov.in/
ಕರ್ನಾಟಕ ವಾರ್ತೆ